MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111


YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 301 | ಬುಧವಾರ : 17-09-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 301 | WEDNESDAY : 17-09-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಬೆಳೆನಷ್ಟ ಪರಿಹಾರ ನೀಡುವಂತೆ ಮನವಿ



ಯುವ ಮಾರ್ಗ ಸುದ್ದಿ

**ಮಾನ್ವಿ,ಸೆ.16–** ಪಟ್ಟಣದ ತಹಸೀಲ್ದಾರ್ ಕಚೇರಿಯಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ಜನಪರ ಬಣ ವತಿಯಿಂದ ತಹಸೀಲ್ದಾರರಿಗೆ ಉಪತಹಸೀಲ್ದಾರ್ ಫಕ್ರುದ್ದೀನ್ ರವರ ಮೂಲಕ ಮನವಿ ಸಲ್ಲಿಸಿ ಕರ್ನಾಟಕ ರಕ್ಷಣಾ ವೇದಿಕೆ ಜನಪರ ಬಣ ರಾಜ್ಯಾಧ್ಯಕ್ಷರಾದ ಶ್ರೀಕಾಂತ ಪಾಟೀಲ್ ಗೂಳಿ ಮಾತನಾಡಿ ತಾಲೂಕಿನ ಜಾಗೀರ ಪನ್ನೂರು, ಯಡಿವಾಳ, ನಲ್ಗಂದಿನ್ನಿ, ಚಿಕ್ಕಕೋಟ್ನೆಕಲ್, ದೇವಿಪುರ, ಖರಬದಿನ್ನಿ,ಮುದ್ದಂಗುಡಿ ಸೇರಿದಂತೆ ವಿವಿಧ ಗ್ರಾಮಗಳಲ್ಲಿ ರೈತರು ಬೆಳೆದ ಹತ್ತಿ ಬೆಳೆ ಅತಿವೃಷ್ಟಿಯಿಂದಾಗಿ ಹಾಳಗಿದ್ದು ರೈತರು ತೀವ್ರ ನಷ್ಟ ಅನುಭವಿಸುತ್ತಿದ್ದಾರೆ ಅದ್ದರಿಂದ ಕಂದಾಯ ಇಲಾಖೆ ಹಾಗೂ ಕೃಷಿ ಇಲಾಖೆಯಿಂದ ಜಂಟಿ ಸಮೀಕ್ಷೆ ನಡೆಸಿ ರೈತರಿಗೆ ಅಗತ್ಯವಾದ ಬೆಳೆನಷ್ಟ ಪರಿಹಾರ ನೀಡುವಂತೆ ಕೋರಿದರು. ಇರ್ಫಾನ್‌ಧಣಿ, ಇಬ್ರಾಹಿಂಖುರೇಷಿ, ರಂಗನಾಥನಾಯಕ, ವಿಶ್ವನಾಥ್‌ಪವಾರ, ಕೃಷ್ಣದಾನಿ ಗಂಗಾಧರಪವಾರ, ಸಂಗನಗೌಡ,ಲಿಂಗಪ್ಪ,ರಂಗರಾಜ್ ಕುಲಕರ್ಣಿ ಸೇರಿದಂತೆ ಇನ್ನಿತರರು ಇದ್ದರು.

## ಭಾರತ–ಅಮೆರಿಕ ಮಾತುಕತೆ

**ನವದೆಹಲಿ,ಸೆ.16–**ಸುಂಕಾಸ್ತ್ರದಿಂದ ಎರಡೂ ದೇಶಗಳ ನಡುವಿನ ಬಾಂಧವ್ಯ ಹಳಸಿರುವ ಬೆನ್ನಲ್ಲೇ ಭಾರತ–ಅಮೆರಿಕ ನಡುವೆ ಮಹತ್ವದ ವ್ಯಾಪಾರ ಒಪ್ಪಂದ ಕುರಿತ ಮಾತುಕತೆ ದೆಹಲಿಯಲ್ಲಿ ಆರಂಭವಾಗಿರುವ ಬಗ್ಗೆ ಹಿರಿಯ ಅಧಿಕಾರಿಯೊಬ್ಬರು ಮಾಹಿತಿ ನೀಡಿದ್ದಾರೆ.

ರಾತ್ರಿ ಅಮೆರಿಕ ಅಧ್ಯಕ್ಷ ಡೊನಾಲ್ಡ್‌ಟ್ರಂಪ್, ಆಡಳಿತದ ಮುಖ್ಯಸಮಾಲೋಚಕ ಬ್ರೆಂಡನ್‌ಲಿಂಚ್ ಆಗಮಿಸಿದ್ದರು. ಈಗ ಉಭಯ ದೇಶಗಳ ನಡುವಿನ ವ್ಯಾಪಾರ ಸಂಬಂಧ ವೃದ್ಧಿಗೆ ಚರ್ಚೆಗಳು ನಡೆಯುತ್ತಿವೆ.

ಭಾರತದ ಮುಖ್ಯಸಮಾಲೋಚಕ ಮತ್ತು ವಾಣಿಜ್ಯ ಸಚಿವಾಲಯದ ವಿಶೇಷ ಕಾರ್ಯದರ್ಶಿ ರಾಜೇಶ್ ಅಗರ್‌ವಾಲ್ ಜತೆ ದಿನಪೂರ್ತಿ ಮಾತುಕತೆ ನಡೆಯಲಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.ಬ್ರೆಂಡೆನ್‌ಲಿಂಚ್ ಅವರುದಕ್ಷಿಣ ಮತ್ತು ಮಧ್ಯ ಏಷ್ಯದ ಅಮೆರಿಕದ (2ನೇಪುಟಕ್ಕೆ)

ಸಿರವಾರ: ವಿವಿಧ ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟದಿಂದ ಶಿಕ್ಷಕರ ದಿನಾಚರಣೆ

## ಎಲ್ಲಾ ವೃತ್ತಿಗಳಿಗಿಂತ ಶಿಕ್ಷಕರ ವೃತ್ತಿ ಶ್ರೇಷ್ಠ – ಹಂಪಯ್ಯ ನಾಯಕ

ಯುವ ಮಾರ್ಗ ಸುದ್ದಿ

**ಸಿರವಾರ, ಸೆ.16–**ಸದೃಢ ರಾಷ್ಟ್ರ ನಿರ್ಮಾಣ ಮಾಡುವ ಶಕ್ತಿ ಶಿಕ್ಷಕರಿಗಿದೆ ಅಂತಹ ಶಿಕ್ಷಕರ ವೃತ್ತಿ ಎಲ್ಲಾ ವೃತ್ತಿಗಳಿಗಿಂತಲೂ ಶ್ರೇಷ್ಠವಾದ ವೃತ್ತಿಯಾಗಿದೆ ಎಂದು ಶಾಸಕ ಜಿ.ಹಂಪಯ್ಯ ನಾಯಕ ಹೇಳಿದರು.




ಭಾನುವಾರದಂದು ಪಟ್ಟಣದ ವಿದ್ಯಾವಾಹಿನಿ ವಸತಿ ಶಾಲೆಯಲ್ಲಿ ಸಿರವಾರ ತಾಲೂಕು ವಿವಿಧ ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟದಿಂದ ಆಯೋಜಿಸಿದ್ದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು, ನಮ್ಮ ರಾಯಕೀಯ ಗುರುಗಳು ಕರ್ನಾಟಕ ಸರ್ಕಾರದ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್. ಬೋಸರಾಜು ಅವರು ಈ ಹಿಂದೆ ಮಾನ್ವಿ ಶಾಸಕರಾಗಿದ್ದ ಸಂದರ್ಭದಲ್ಲಿ ಶಿಕ್ಷಕರಿಗೆ ಚಿನ್ನದ ಪದಕ ನೀಡುವ ಪರಿಪಾಠ ಹಾಕಿದ್ದರು ನಂತರ ಮೀಸಲು ಕ್ಷೇತ್ರವಾದ ನಂತರ ನಾನು ಇಲ್ಲಿ ಶಾಸಕನಾದ ಮೇಲೆ ಬೋಸರಾಜು ಸಾಹೇಬರ ಹಾದಿಯಲ್ಲಿ ನಡೆದುಕೊಂಡು ಚಿನ್ನದ ಪದಕ ನೀಡುವುದನ್ನು ಮುಂದುವರೆಸಿಕೊಂಡು ಬರುತ್ತಿದ್ದೇನೆ, ಮೊದಲು ಸರ್ಕಾರಿ ಶಾಲಾ ಶಿಕ್ಷಕರಿಗೆ ಮಾತ್ರ ಚಿನ್ನದ ಪದಕ ನೀಡಲಾಗುತ್ತಿತ್ತು ಅದನ್ನು ಖಾಸಗಿ ಶಾಲಾ ಶಿಕ್ಷಕರಿಗೂ ನೀಡುವ ಮೂಲಕ ಯಾರಿಗೂ ನಿರಾಶೆಯಾಗಬಾರದೆಂದು ಸರ್ಕಾರಿ ಮತ್ತು ಖಾಸಗಿ ಶಾಲಾ ಶಿಕ್ಷಕರಿಗೆ ಚಿನ್ನದ ಪದಕ ನೀಡುತ್ತಿದ್ದೇವೆ. ಈಗ ಚಿನ್ನದ ದರ ಹೆಚ್ಚಾಗಿದೆ ಹಾಗಂತ ಶಿಕ್ಷಕರಿಗೆ ನಾನು ಕೊಟ್ಟ ಮಾತು ತಪ್ಪಿ ನಡೆಯಬಾರದು ಎಂದು ಏನೇ ಇದ್ದರೂ ಕೊಟ್ಟ ಮಾತು ನಡೆಸಿಕೊಂಡು ಬಂದಿದ್ದೇನೆ ಎಂದರು. ಗ್ರಾಮೀಣ ಭಾಗದಲ್ಲಿ ಶಿಕ್ಷಣ ಕ್ಷೇತ್ರದಲ್ಲಿ ಖಾಸಗಿ ಶಿಕ್ಷಣ ಸಂಸ್ಥೆಗಳ ಕೊಡುಗೆ ಅಪಾರವಾಗಿದೆ ಸರ್ಕಾರಿ ಮತ್ತು ಖಾಸಗಿ ಶಿಕ್ಷಕರು ನಮ್ಮ ಗ್ರಾಮೀಣ ಭಾಗದಲ್ಲಿ ಶೈಕ್ಷಣಿಕವಾಗಿ ಉತ್ತುಂಗಕ್ಕೆ ಕೊಂಡ್ಯೊಯ್ಯುವಂತೆ ಸಲಹೆ ನೀಡಿದರು. ಇದೇ ವೇಳೆ ಶಾಸಕರು ಕೊಡ ಮಾಡುವ ನಾಲ್ಕು ಜನ ಅತ್ಯುತ್ತಮ ಶಿಕ್ಷಕರಿಗೆ ಚಿನ್ನದ ಪದಕ ನೀಡಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ನವಲಕಲ್ ಬೃಹನ್ಮಠದ ಅಭಿನವ ಶ್ರೀಸೋಮನಾಥ ಶಿವಾಚಾರ್ಯ ಮಹಾಸ್ವಾಮಿಗಳು ಸಾನಿಧ್ಯ ವಹಿಸಿದ್ದರು, ಮಾಜಿ ಶಾಸಕರಾದ ಬಸನಗೌಡ ಬ್ಯಾಗವಾಟ್, ಗಂಗಾಧರ ನಾಯಕ, ಪ.ಪಂ. ಅಧ್ಯಕ್ಷ ವೈ.ಭೂಪನಗೌಡ, ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಶೇಖರ ದೊಡ್ಡಮನಿ, ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟದ ಅಧ್ಯಕ್ಷ ಪ್ರಕಾಶ ಪಾಟೀಲ್, ಪ್ರಧಾನ ಕಾರ್ಯದರ್ಶಿ ಮೋಸಿನ್ ಕವಿತಾಳ, ಮುಖಂಡರಾದ ಚುಕ್ಕಿ ಸೂಗಪ್ಪ ಸಾಹುಕಾರ್, ಜೆ.ಶರಣಪ್ಪಗೌಡ ಒಕ್ಕೂಟದ ಜಿಲ್ಲಾಧ್ಯಕ್ಷರಾದ ಟಿ.ಬಸವರಾಜ, ಸಿರವಾರ ತಾಲೂಕು ನಿಕಟ ಪೂರ್ವ ಅಧ್ಯಕ್ಷರಾದ ಚಂದ್ರಶೇಖರ್ ಪಾಟೀಲ್ ಬಲ್ಲಟಗಿ, ಪಿ.ತಮ್ಮಣ್ಣ ನಾಯಕ ಬಲ್ಲಟಗಿ, ಚಂದ್ರಶೇಖರ್ ಹರವಿ ಇದ್ದರು.

## ಶಾಸಕ ಬಸನಗೌಡ ದದ್ದಲರಿಂದ ಪ್ರಗತಿ ಪರಿಶೀಲನಾ ಸಭೆ, ಅಧಿಕಾರಿಗಳಿಗೆ ಖಡಕ್ ಸೂಚನೆ



ಯುವ ಮಾರ್ಗ ಸುದ್ದಿ

**ಮಾನ್ವಿ,ಸೆ.16–**ಪಟ್ಟಣದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ನಡೆದ ರಾಯಚೂರು ಗ್ರಾಮೀಣ ವಿಧಾನಸಭಾ ಕ್ಷೇತ್ರದ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯಲ್ಲಿ ರಾಯಚೂರು ಗ್ರಾಮೀಣ ಶಾಸಕ ಹಾಗೂ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಬಸವನಗೌಡ ದದ್ದಲ್ ಮಾತನಾಡಿ, ಗ್ರಾಮೀಣ ಭಾಗದಲ್ಲಿ ಗ್ರಾಮ ಪಂಚಾಯಿತಿಗಳ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಸರ್ಕಾರಿ ,ಅಂಗನವಾಡಿ ,ಶಾಲೆ ಕಟ್ಟಡಗಳಿಗೆ ಪ್ರತಿ ವಾರಕ್ಕೆ ಒಮ್ಮೆಯಾದರು ಭೇಟಿ ನೀಡಿ ಅಲ್ಲಿನ ಮೂಲಸೌಕರ್ಯಗಳನ್ನು ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳಬೇಕು. ರಾಜ್ಯ ಸರ್ಕಾರವು ಮಕ್ಕಳಿಗಾಗಿ ಮಾದರಿ ಅಂಗನವಾಡಿಗಳನ್ನು ನಿರ್ಮಾಣ ಮಾಡುವುದಕ್ಕೆ 20 ಲಕ್ಷ ಅನುದಾನವನ್ನು ನೀಡುತ್ತಿದೆ ಗ್ರಾಮೀಣ ಕ್ಷೇತ್ರದಲ್ಲಿನ 60 ಅಂಗನವಾಡಿ ಕೇಂದ್ರಗಳಲ್ಲಿ 9 ಅಂಗನವಾಡಿ ಕೇಂದ್ರಗಳು ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದ್ದು ಅಂಗನವಾಡಿ ಕೇಂದ್ರಗಳ ಕಟ್ಟಡ ನಿರ್ಮಾಣಕ್ಕೆ ಗ್ರಾಮ ಪಂಚಾಯಿತಿಯಿಂದ ನಿವೇಶನವನ್ನು ಗುರುತಿಸಿ ನೀಡುವಂತೆ ಪಿ.ಡಿ.ಓ.ಗಳಿಗೆ ಹಾಗೂ ತಹಸೀಲ್ದಾರ್ ರವರಿಗೆ ಸೂಚಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದಿ ಇಲಾಖೆಯ ತಾ.ಶಿಶುಅಭಿವೃದ್ಧಿ ಅಧಿಕಾರಿ ಮನ್ಸೂರ್ ಅಹ್ಮದ್ ರವರಿಗೆ ಬಳ್ಳಾರಿ ಕೆ.ಎಂ.ಎಫ್ ನಿಂದ ಅಂಗನವಾಡಿ ಕೇಂದ್ರಗಳಿಗೆ ಹಾಲಿನ ಪುಡಿ ಸರಬರಾಜಿನಲ್ಲಿ ವ್ಯತ್ಯಯವಾಗುತ್ತಿದ್ದು ಈ ಕುರಿತು ಪತ್ರ ಬರೆಯುವಂತೆ ಸೂಚಿಸಿದರು.ಆಹಾರ ಸಾಮಗ್ರಿಗಳ ಸರಬರಾಜು,ಮೊಟ್ಟೆ ವಿತರಣೆಯನ್ನು ಫಲಾನುಭಾವಿಗಳಿಗೆ ಸರಿಯಾಗಿ ವಿತರಿಸಬೇಕು ಎಂದು ಸೂಚಿಸಿದರು.

ಜೂಕುರು ಗ್ರಾಮದ ಸರ್ಕಾರಿ ಶಾಲೆ ನಿರ್ಮಾಣಕ್ಕೆಅಗತ್ಯ ಅನುದಾನ ನೀಡಲಾಗಿದ್ದರು ಕೂಡ ಕಟ್ಟಡ ನಿರ್ಮಾಣ ಪ್ರಾರಂಭವಾಗಿಲ್ಲ ವಿದ್ಯಾರ್ಥಿಗಳು ಬಯಲಿನಲ್ಲಿ ಪಾಠ ಕೇಳುವಂತಾಗಿದೆ 1 ವರ್ಷ ವಾದರು ಕೂಡ ಕ್ಯಾಷೂಟೆಕ್ ಸಂಸ್ಥೆಯವರು ಶಾಲೆಯ ಕಟ್ಟಡ ನಿರ್ಮಾಣಕ್ಕೆ ಮುಂದಾಗಿಲ್ಲ ಸ್ಥಳದಲ್ಲಿ ಸಮಸ್ಯೆ ಇದಲ್ಲಿ ಪೊಲೀಸ್ ಇಲಾಖೆಯ ನೆರವು ಪಡೆದು ನಿರ್ಮಾಣ ಕಾಮಗಾರಿಯನ್ನು ಪ್ರಾರಂಭಿಸುವಂತೆ ಹಾಗೂ ವಲ್ಕಂದಿನ್ನಿ,ಸುಂಕೇಶ್ವರ ,ತಮ್ಮಪುರ, ಸೀಕಲ್ ಗ್ರಾಮದ ಶಾಲೆಗಳಿಗೆ ಕಟ್ಟಡ ನಿರ್ಮಾಣಕ್ಕೆ ತಲಾ 5 ಎಕರೆ(2ನೇಪುಟಕ್ಕೆ)

## ಇಂದು ಶಿಕ್ಷಕರ ದಿನಾಚರಣೆ : ಮಲ್ಲಿಕಾರ್ಜುನ ಸ್ವಾಮಿ

ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಸೆ.16–** ಪಟ್ಟಣದ ವಿಜಯ ಮಹಾಂತೇಶ್ವರ ಶಾಖಾಮಠದ ಸಭಾಂಗಣದಲ್ಲಿ ಇಂದು ಬುಧವಾರ ಶಿಕ್ಷಕರ ದಿನಾಚರಣೆ ಆಯೋಜನೆ ಮಾಡಲಾಗಿದೆ ಎಂದು ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟದ ತಾಲೂಕು ಅಧ್ಯಕ್ಷ ಮಂಜುನಾಥ ಸ್ವಾಮಿ ಹೇಳಿದರು.




ಸ್ಥಳೀಯ ಪತ್ರಿಕಾ ಭವನದಲ್ಲಿ ಮಂಗಳವಾರ ಸುದ್ದುಗೋಷ್ಠಿ ನಡೆಸಿದ ಅವರು, ಶಿಕ್ಷಕರ ದಿನಾಚರಣೆ ಸಮಾರಂಭದಲ್ಲಿ ತಾಲೂಕಿನ 70 ಜನ ವಿವಿಧ ಸಾಧಕ ಶಿಕ್ಷಕರು, ಉಪನ್ಯಾಸಕರನ್ನು ಸನ್ಮಾನಿಸಿ ಗೌರವಿಸಲಾಗುವುದು. ಸ್ವಾಮೀಜಿಗಳು, ಜನಪ್ರತಿನಿಧಿಗಳು ಸೇರಿ ಸಂಘಟನೆ ಜಿಲ್ಲಾ ಮುಖಂಡರು ಹಾಜರಿರುತ್ತಾರೆ. ಹೆಚ್ಚಿನ ಸಂಖ್ಯೆಯಲ್ಲಿ ಖಾಸಗಿ ಶಾಲಾ ಶಿಕ್ಷಕರುಗಳು ಪಾಲ್ಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಸಿದ್ರಾಮಪ್ಪ ಸಾಹುಕಾರ, ಸ್ವಾಗತ ಸಮಿತಿ ಅಧ್ಯಕ್ಷ ಸಂಜೀವಕುಮಾರ ಕಂದಗಲ್, ಆದಯ್ಯ, ನರಸಪ್ಪ ಯಾದವ್ ಸೇರಿ ಇತರರು ಇದ್ದರು.

## ಶಾಲಾ ಮುಖ್ಯ ಗುರುಗಳು ಎಸ್ಸೆಸ್ಸೆಲ್ಸಿ ಫಲಿತಾಂಶ ಸುಧಾರಣೆಗೆ ಒತ್ತು ಕೊಡಲಿ

ಯುವ ಮಾರ್ಗ ಸುದ್ದಿ

**ರಾಯಚೂರು,ಸೆ.16–** ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ.40ಕ್ಕಿಂತ ಕಡಿಮೆ ಫಲಿತಾಂಶ ಪಡೆದ 62 ಶಾಲೆಗಳ ಮುಖ್ಯ ಶಿಕ್ಷಕರೊಂದಿಗೆ ಮಹತ್ವದ ಸಮಾಲೋಚನಾ ಸಭೆಯು ಮಾಹನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರ ಅಧ್ಯಕ್ಷತೆಯಲ್ಲಿ ಸೆ.15ರಂದು ನಡೆಯಿತು.



ಮಹಾನಗರ ಪಾಲಿಕೆಯ ವಲಯ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಆಯುಕ್ತರು, ಶೈಕ್ಷಣಿಕ ಗುಣಮಟ್ಟ ಹೆಚ್ಚಿಸುವ ಬಗ್ಗೆ ಹಾಗೂ ಪರೀಕ್ಷಾ ಫಲಿತಾಂಶವನ್ನು ಗಮನಾರ್ಹವಾಗಿ ಸುಧಾರಿಸುವ ಬಗ್ಗೆ ಶಿಕ್ಷಣ ಇಲಾಖೆಯ ಅಧಿಕಾರಿಗಳು ಮತ್ತು ಆಯಾ ಶಾಲೆಯ ಮುಖ್ಯ ಗುರುಗಳು ಸೇರಿದಂತೆ ಎಲ್ಲ ಗುರುಗಳು ವಿಶೇಷ ಕಾಳಜಿ ವಹಿಸಬೇಕು ಎಂದು ಸೂಚನೆ ನೀಡಿದರು.


**10 ದಿನಗಳ ಗಡುವು:** ಪ್ರತಿಯೊಂದು ಶಾಲೆಯಲ್ಲಿ ಶಿಕ್ಷಕರು ಮತ್ತು ವಿದ್ಯಾರ್ಥಿಗಳ ಹಾಜರಾತಿ ವರದಿ, ಶಾಲೆಯಿಂದ ಹೊರಗುಳಿದ ವಿದ್ಯಾರ್ಥಿಗಳ ವರದಿ, ಪ್ರತಿ ಶಾಲೆಯಲ್ಲಿನ ಮೂಲಭೂತ ಸೌಲಭ್ಯಗಳು ಮತ್ತು ನ್ಯೂನತೆಗಳ ಬಗ್ಗೆ ಸವಿವರವಾದ ವರದಿಯನ್ನು ಹತ್ತು ದಿನಗಳೊಗೆ ಸಲಿಸುವಂತೆ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ಮತ್ತು ಎಲ್ಲಾ ಮುಖ್ಯಾಧ್ಯಾಪಕರಿಗೆ ಗಡುವು ವಿದಿಸಿದರು. ಎರಡು ವಾರಗಳ ನಂತರ ನಿಗದಿಪಡಿಸಲಾಗುವ ಮುಂದಿನ ಸಭೆಗೆ ಅಗತ್ಯವಿರುವ ಎಲ್ಲಾ ಮಾಹಿತಿಯೊಂದಿಗೆ ಮುಖ್ಯಾಧ್ಯಾಪಕರು ಖುದ್ದು ಹಾಜರಾಗಬೇಕು ಎಂದು ನಿರ್ದೇಶನ ನೀಡಿದರು.

**ಉಪ ಸಮಿತಿ ರಚಿಸಿ ಜವಾಬ್ದಾರಿ ಹಂಚಿಕೆ:** ರಾಯಚೂರ ನಗರ ಸೇರಿದಂತೆ ಒಟ್ಟಾರೆ ಜಿಲ್ಲೆಯ ಫಲಿತಾಂಶ ಸುಧಾರಿಸಬೇಕು ಎನ್ನುವ ಉದ್ದೇಶದಿಂದ ಜಿಲ್ಲಾಧಿಕಾರಿಗಳು ಈ ಹಿಂದೆ ಸಭೆ ನಡೆಸಿ ಮೇಲುಸ್ತುವಾರಿಯ ನಿರ್ದೇಶನ ನೀಡಿದ್ದರು. ವಿಶೇಷವಾಗಿ ರಾಯಚೂರ ನಗರ ವ್ಯಾಪ್ತಿಯಲ್ಲಿನ ಎಲ್ಲ ಶಾಲೆಗಳ ಫಲಿತಾಂಶ ಸುಧಾರಿಸಬೇಕು ಎಂದು ಮೇಲುಸ್ತುವಾರಿಗಾಗಿ ಮಹಾನಗರ ಪಾಲಿಕೆಯ ಆಯುಕ್ತರ ನೇತೃತ್ವದಲ್ಲಿ ಇತರೆ ಇಲಾಖೆಗಳ ಅಧಿಕಾರಿಗಳನ್ನೊಳಗೊಂಡು ಸಮಿತಿ ರಚನೆ ಮಾಡಿದ್ದರು. ಅದರನ್ವಯ ಸಭೆ ನಡೆಸಿ ಫಲಿತಾಂಶ ಸುಧಾರಣೆಗಾಗಿ ಪರಿಶೀಲಿಸಲಾಗುತ್ತಿದೆ. ರಾಯಚೂರ ಸಿಟಿ ವ್ಯಾಪ್ತಿಯಲ್ಲಿ, ಎಸ್ಸೆಸ್ಸೆಲ್ಸಿಯಲ್ಲಿ ಕಳಪೆ ಸಾಧನೆ ತೋರಿದಲ್ಲಿ ಈ ಬಗ್ಗೆ ಪರಿಶೀಲಿಸಲು 5–10 ಶಾಲೆಗಳ ಗುಂಪು ರಚನೆ ಮಾಡಿ ಪ್ರತಿ ಗುಂಪಿಗೆ ತಾಲೂಕು ಮಟ್ಟದ (2ನೇಪುಟಕ್ಕೆ)

## ಬಿಜೆಪಿ ಪಕ್ಷಕ್ಕೆ ಕಾರ್ಯಕರ್ತರೇ ಜೀವಾಳ– ಮಾಜಿ ಸಚಿವ ಕೆ.ಶಿವನಗೌಡ ನಾಯಕ

ಯುವ ಮಾರ್ಗ ಸುದ್ದಿ

**ಅರಕೇರಾ,ಸೆ.16–**ಬಿಜೆಪಿ ಪಕ್ಷಕ್ಕೆ ಕಾರ್ಯಕರ್ತರೇ ಜೀವಾಳ. ಪದಾಧಿಕಾರಿಗಳು ಎಲ್ಲರನ್ನು ಒಗ್ಗೂಡಿಸಿ ಸಂಘಟನೆಗೆ ಮುಂದಾಗಬೇಕು ಎಂದು ಮಾಜಿ ಸಚಿವ ಕೆ.ಶಿವನಗೌಡ ನಾಯಕ ಕರೆ ನೀಡಿದರು.



ಪಟ್ಟಣದ ಮಹರ್ಷಿ ವಾಲ್ಮೀಕಿ ಭವನದಲ್ಲಿ ಬಿಜೆಪಿ ಮಂಡಲದ ವತಿಯಿಂದ ಹಮ್ಮಿಕೊಂಡಿದ್ದ ಸೇವಾ ಪಾಕ್ಷಿಕ ಕಾರ್ಯಗಾರವನ್ನು ಉದ್ಘಾಟಿಸಿ ಮಂಗಳವಾರ ಮಾತನಾಡಿದರು. ಸಂವಿದಾನದ ಆಶಯಗಳನ್ನು ಇಡೇರಿಸುವಲ್ಲಿ ಬಿಜೆಪಿ ಬದ್ಧವಾಗಿ ಕೆಲಸ ಮಾಡುತ್ತಿದೆ. ಪಕ್ಷ ಸಂಘಟನೆ, ಪಕ್ಷ ನೀಡುವ ಪ್ರತಿಯೊಂದು ಜವಬ್ದಾರಿಯನ್ನು ಎಲ್ಲ ಕಾರ್ಯಕರ್ತರು, ಪದಾಧಿಕಾರಿಗಳು ಮಾಡಲು ಸಂಕಲ್ಪ ಮಾಡಬೇಕು ಎಂದರು.

ಬಿಜೆಪಿ ಜಿಲ್ಲಾಧ್ಯಕ್ಷ ವೀರನಗೌಡ ಲೆಕ್ಕಿಹಾಳ ಮಾತನಾಡಿ, ಪ್ರಧಾನಿ ನರೇಂದ್ರ ಮೋದಿಜೀ ಅವರ ಹುಟ್ಟು ಹಬ್ಬ ಕೇವಲ ನೆಪ ಮಾತ್ರ. ಸೇವೆಯ ಮೂಲಕ ಜನರನ್ನು ತಲುಪುವುದು ಬಿಜೆಪಿ ಸಿದ್ಧಾಂತ. ಚುನಾವಣೆ ಬಂದಾಗ ಮಾತ್ರ ಜನರಲ್ಲಿ ನಾವು ಹೋಗುವುದಿಲ್ಲ. ನಿರಂತರ ಜನಸೇವೆಯನ್ನು ಮಾಡುವುದು ಬಿಜೆಪಿ ಉದ್ದೇಶವಾಗಿದೆ. ಸೆ.17 ರಿಂದ ಅ.2 ರವರೆಗೆ ವಿವಿಧ ಸಾಮಾಜಿಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು, ರಕ್ತದಾನ, ಗುಡಿ ಗುಂಡಾರ, ಶಾಲಾ ಕಾಲೇಜು, ಬಸ್ ನಿಲ್ದಾಣ ಸ್ವಚ್ಛತೆ, ಬಡವರಿಗೆ ಆರೋಗ್ಯ ತಪಾಸಣೆ, ದೇಸಿ ಕ್ರೀಡೆಗಳ ಆಯೋಜನೆ ಮಾಡುತ್ತಿದ್ದೇವೆ ಎಂದರು. ಮುಂಡರಗಿ ಮುದುಕಣ್ಣ ತಾತ, ಕೊತ್ತದೊಡ್ಡಿ ಕೆಂಚಣ್ಣ ಪೂಜಾರಿ ಸಾನಿಧ್ಯ ವಹಿಸಿದ್ದರು. ಪ್ರಮುಖರಾದ ಸತ್ಯನಾರಾಯಣ ನಾಯಕ ಪೋ.ಪಾ, ಕೆ.ಅನಂತರಾಜ ನಾಯಕ, ಲಕ್ಷ್ಮಣ ರಾಠೋಡ, ಜಂಬಣ್ಣ ನೀಲಗಲ್, ಶರಣಬಸವ ಪಾಟೀಲ್ ಜೋಳದೆಡಗಿ, ವೆಂಕಟೇಶ ದೊರೆ, ಗೋಪಾಲಪ್ಪ ಗೌಡ, ಶರಣಗೌಡ ಬಿ.ಗಣೇಕಲ್, ಸೀತಣ್ಣ ನಾಯಕ ಗುರಿಕಾರ, ಬೂದೆಪ್ಪ ಸಾಹುಕಾರ, ಜಾವ್ಹೀದ್ ಚಿಂಚೋಳಿಕರ್, ಶಾಂತಪ್ಪ ಸಾಹುಕಾರ, ಮಲ್ಲಿಕಾರ್ಜುನ ಗುಡಿ, ನಾಗರಾಜ ಅಬಕಾರಿ ಇತರರಿದ್ದರು.

## ಮೊದಲನೇಯ ಪುಟದಿಂದ

# ಶಾಲಾ ಮುಖ್ಯ ಗುರುಗಳು ಎಸ್ಸೆಸ್ಸೆಲ್ಸಿ ಫಲಿತಾಂಶ ಸುಧಾರಣೆಗೆ ಒತ್ತು ಕೊಡಲಿ

ಅಧಿಕಾರಿಗಳ ನೇತೃತ್ವದಲ್ಲಿ ಉಪ ಸಮಿತಿಗಳನ್ನು ರಚಿಸಿ ಜವಾಬ್ದಾರಿಯನ್ನು ಹಂಚಿಕೆ ಮಾಡಲಾಗುವುದು ಎಂದು ಅವರು ತಿಳಿಸಿದರು.

ಅಂಕಗಳಿಕೆಯಷ್ಟೇ ಸಾಧನೆಯಲ್ಲ: ವಿದ್ಯಾರ್ಥಿಗಳ ಶೈಕ್ಷಣಿಕ ಸಾಧನೆ ಅನ್ನುವುದು ಕೇವಲ ಅಂಕಗಳಿಸುವುದಷ್ಟೇ ಅಲ್ಲ, ಬದಲಾಗಿ ಅವರಿಗೆ ಉಜ್ವಲ ಭವಿಷ್ಯಕ್ಕಾಗಿ ಅವರಲ್ಲಿನ ಕೌಶಲಗಳಿಗೆ ಉತ್ತೇಜನ ನೀಡುವುದು, ಅವರಲ್ಲಿನ ಬೌದ್ಧಿಕ ಸಾಮರ್ಥ್ಯವನ್ನು ಹೆಚ್ಚಿಸುವುದು, ಈ ಮೂಲಕ ಸಮರ್ಥ ಮಾನವ ಸಂಪನ್ಮೂಲದ ಅಸ್ತಿತ್ವಕ್ಕೆ ಅಡಿಪಾಯ ಹಾಕುವುದಾಗಿದೆ. ಉತ್ತಮ ಶಿಕ್ಷಣವು ರಾಷ್ಟ್ರ ಮತ್ತು ನಗರಕ್ಕೆ ಬಲವಾದ ಮಾನವ ಸಂಪನ್ಮೂಲವನ್ನು ಕೊಡುವುದಾಗಿದೆ. ಜಿಲ್ಲಾಧಿಕಾರಿಗಳ ಆಶಯದಂತೆ ಮಹಾನಗರ ಪಾಲಿಕೆ ವಹಿಸುತ್ತಿರುವ ಈ ಕ್ರಮದಿಂದಾಗಿ ಜಿಲ್ಲೆಯ ಶೈಕ್ಷಣಿಕ ನೆಲೆಯನ್ನು ಬಲಪಡಿಸುವ ಮತ್ತು ವಿದ್ಯಾರ್ಥಿಗಳ ಜೀವನಕ್ಕೆ ಹೊಸ ದಿಕ್ಕನ್ನು ನೀಡುವ ನಿರೀಕ್ಷೆಯಿದೆ ಎಂದು ಇದೆ ವೇಳೆ ಪಾಲಿಕೆಯ ಆಯುಕ್ತರಾದ ಜುಬಿನ್ ಅವರು ಸಲಹೆ ಮಾಡಿದರು.

ಸಭೆಯಲ್ಲಿ ಪಾಲಿಕೆಯ ಉಪ ಆಯುಕ್ತರಾದ ಸಂತೋಷ ರಾಣಿ, ಶಿಕ್ಷಣ ಇಲಾಖೆಯ ಅಧಿಕಾರಿಗಳು ಮತ್ತು ವಿವಿಧ ಶಾಲೆಗಳ ಮುಖ್ಯ ಗುರುಗಳು ಇದ್ದರು.

# ಶಾಸಕ ಬಸನಗೌಡ ದದ್ದಲರಿಂದ ಪ್ರಗತಿ ಪರಿಶೀಲನಾ ಸಭೆ, ಅಧಿಕಾರಿಗಳ ಸೂಚನೆ ಖಡಕ್ ಸೂಚನೆ

ಸರ್ಕಾರಿ ಜಮೀನು ನೀಡುವಂತೆ ಕಂದಾಯ ಇಲಾಖೆಗೆ ಪ್ರಸ್ತಾವನೆ ನೀಡಿ ಕಲ್ಲೂರು, ಸದಾಪುರ,ಕುರ್ಡಿ ಗ್ರಾಮಗಳಲ್ಲಿ ಉರ್ದು ಪ್ರೌಢಶಾಲೆಗಳ ನಿರ್ಮಾಣಕ್ಕೆ ಪ್ರಸ್ತಾವನೆಯನ್ನು ನೀಡಿ ಈ ಬಾರಿ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯಲ್ಲಿ ಉತ್ತಮ ಪಾಲಿತಾಂಶಕ್ಕಾಗಿ ಶಿಕ್ಷಕರ ಕೊರತೆ ಇರುವ ಕಡೆ ಅತಿಥಿ ಶಿಕ್ಷಕರನ್ನು ನೇಮಕ ಮಾಡಿ ಅಗತ್ಯ ತರಬೇತಿ ನೀಡುವಂತೆ ಶಿಕ್ಷಣ ಇಲಾಖೆಯ ತಾ.ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಶೇಖರ .ಡಿ. ರವರಿಗೆ ಸೂಚಿಸಿದರು. ಅವಕಾರಿ ಇಲಾಖೆಯ ಅಧಿಕಾರಿಗಳು ಅಕ್ರಮ ಮದ್ಯಮಾರಾಟ ಹಾಗೂ ಮಕ್ಕಳಿಗೆ ಮಾದಕ ವಸ್ತುಗಳನ್ನು ಮಾರಾಟ ಮಾಡುತ್ತಿರುವವರ ಮೇಲೆ ಕ್ರಮಕೈಗೊಳ್ಳುವಂತೆ ಸೂಚಿಸಿದರು.ರೈತರ ಬೇಡಿಕೆಗಳಿಗೆ ಅನುಗುಣವಾಗಿ ರಾಜಲಬಂಡಿ,ಕುರ್ಡಿ ಗ್ರಾಮದಲ್ಲಿನ ಕೃಷಿ ಸಹಕಾರಿ ಸೊಸೈಟಿಗಳಿಗೆ ರಸಗೊಬ್ಬರ ಪೂರೈಕೆ ಮಾಡಿ ಹಾಗೂ ಹಿಂಗಾರಿನಲ್ಲಿ ರೈತರು ಬಿತ್ತನೆ ಮಾಡುವುದಕ್ಕೆ ಅಗತ್ಯವಿರುವ ಹತ್ತಿ,ಕಡ್ಲೆ,ಜೋಳದಬೀಜಗಳನ್ನು ಪೂರೈಕೆ ಮಾಡಿ, ಹತ್ತಿ ಬೆಳೆಯಲ್ಲಿ ಲದ್ದಿಹುಳುವಿನ ಬಾದೆ ಕಂಡುಬಂದಿದ್ದು ಕೃಷಿ ಇಲಾಖೆಯ ರೈತ ಸಂಪರ್ಕ ಕೇಂದ್ರಗಳ ಮೂಲಕ ರೈತರಿಗೆ ಅಗತ್ಯ ಕಿಟನಾಶಕಗಳನ್ನು ನೀಡಿ, ಕೃಷಿ ಭಾಗ್ಯ ಯೋಜನೆಯಡಿಯಲ್ಲಿ ಕೆರೆ ನಿರ್ಮಾಣ ಸೇರಿದಮತೆ ಅಗತ್ಯ ಸೌಲಭ್ಯಗಳನ್ನು ನೀಡುವಂತೆ ತಾಲೂಕು ಕೃಷಿ ಸಹಾಯಕ ನಿರ್ದೇಶಕರಾದ ಗುರುನಾಥ ಭೂಸನೂರೆ ರವರಿಗೆ ಸೂಚಿಸಿದರು. ರಾಜಲಬಂಡ ತೋಟಗಾರಿಕೆ ಇಲಾಖೆಯ ಕ್ಷೇತ್ರದಲ್ಲಿ ತೋಟಗಾರಿಕೆ ಬೆಳೆಗಳನ್ನು ಬೆಳೆಯುವುದಕ್ಕೆ ಸರ್ಕಾರದಿಂದ 60 ಎಕರೆ ಬೂಮಿಯನ್ನು ನೀಡಲಾಗಿದ್ದರು ಕೇವಲ 20 ಎಕರೆಯಲ್ಲಿ ಮಾತ್ರ ತೋಟಗಾರಿಕೆ ಬೆಳೆಗಳನ್ನು ಬೆಳೆಯುತ್ತಿದ್ದು ಅಭಿವೃದ್ಧಿ ಪಡಿಸದೆ ಇರುವ ಜಮೀನಿನಲ್ಲಿ 10 ಎಕರೆ ಜಮೀನನ್ನು ಸರ್ಕಾರಿ ಆಸ್ಪತ್ರೆ, ವಿವಿಧ ವಸತಿ ನಿಲಯಗಳ ನಿರ್ಮಾಣಕ್ಕೆ ನೀಡುವುದಕ್ಕೆ ಕ್ರಮ ಕೈಗೊಳ್ಳುವಂತೆ ತಾ.ಹಿರಿಯ ತೋಟಗಾರಿಕ ಸಹಾಯಕ ನಿರ್ದೇಶಕರಾದ ಚಂದ್ರಶೇಖರ .ಕೆ.ರವರಿಗೆ ಸೂಚಿಸಿದರು. ರಾಜಲ ಬಂಡ ಅಣೆಕಟ್ಟೆ ನಿರ್ಮಾಣಕ್ಕಾಗಿ ನೀರವಾರಿ ಇಲಾಖೆಗೆ ನೀಡಿದ ಜಮೀನಿನ ಸ್ವಲ್ಪ ಪ್ರದೇಶದಲ್ಲಿ ಕಳೆದ 30 ವರ್ಷಗಳಿಂದ ವಸತಿರಹಿತರು ಮನೆಗಳನ್ನು ನಿರ್ಮಾಣ ಮಾಡಿಕೊಂಡಿದ್ದು ಅಂತಹವರಿಗೆ ಹಕ್ಕು ಪತ್ರ ನೀಡುವುದಕ್ಕೆ ಪರಿಶೀಲನೆ ನಡೆಸಿ ಹಾಗೂ ಸರ್ಕಾರ ಕಂದಾಯ ಗ್ರಾಮಗಳ ನಿರ್ಮಾಣಕ್ಕೆ ಅವಕಾಶ ನೀಡಿದ್ದು ಸೂಕ್ತ ಗ್ರಾಮಗಳನ್ನು ಗುರುತಿಸಿ ಸರ್ಕಾರಕ್ಕೆ ಪ್ರಸ್ತವಾನೆ ಸಲ್ಲಿಸಿ, ಅಗತ್ಯ ಇರುವ ಕಡೆ ಉಪಕಂದಾಯ ಗ್ರಾಮಗಳನ್ನು ನಿರ್ಮಾಣ ಮಾಡಿ, ಗ್ರಾಮಗಳಲ್ಲಿ ಕಂದಾಯ ಅದಾಲತ್ ನಡೆಸಿ ಗ್ರಾಮೀಣ ಭಾಗದಲ್ಲಿ ವಾರಸುದಾರರು ಮೃತ ಪಟ್ಟಿರುವ ಜಮೀನುಗಳ ಕುಟುಂಬದ ವರಸುದಾರರಿಗೆ ಅಗತ್ಯವಿರುವ ಪೋತಿವಿರಾಸತ್ ಮಾಡಿಕೊಡುವಂತೆ ತಹಸೀಲ್ದಾರ್ ಭೀಮರಾಯ ರಾಮಸಮುದ್ರ ರವರಿಗೆ ಸೂಚಿಸಿದರು.

ಜಲಾದರೆ ಯೋಜನೆಯ ಅವಧಿ ಪೂರ್ಣಗೊಂಡು 6 ತಿಂಗಳು ಕಳೆದರು ಕೂಡ ಇದುವರೆಗೂ ಕೂಡ ನೀರು ಸಂಗ್ರಹಣೆಗೆ ಅಗತ್ಯವಿರುವ 19 ಟ್ಯಾಂಕ್ ಗಳಲ್ಲಿ 4 ಮಾತ್ರ ಪೂರ್ಣಗೊಂಡಿವೇ ಸರ್ಕಾರದಿಂದ ಸಾವಿರಾರು ಕೋಟಿ ಅನುದಾನ ನೀಡಿದರು ಕೂಡ ಗ್ರಾಮೀಣ ಭಾಗದ ಜನರಿಗೆ ಶುದ್ದ ಕುಡಿಯುವ ನೀರು ನೀಡುವುದಕ್ಕೆ ಗ್ರಾಮೀಣ ನೀರು ಸರಬರಾಜು ಹಾಗೂ ನೈರ್ಮಾಲ್ಯ ಇಲಾಖೆಯ ಅಧಿಕಾರಿಗಳಿಗೆ ಸಾಧ್ಯವಾಗುತ್ತಿಲ್ಲ , ಬೈಲಮರ್ಚೆಡ್ ಗ್ರಾಮದಲ್ಲಿ ಕುಡಿಯುವ ನೀರಿನ ಕೆರ ನಿರ್ಮಾಣಕ್ಕೆ ಭೂಮಿಯನ್ನು ನೀಡಿದರು ಕೂಡ ಕೆರೆ ನಿರ್ಮಾಣಕ್ಕೆ ಇದುವರೆಗೂ ಚಾಲನೆ ನೀಡಿಲ್ಲ ಎಂದು ಗ್ರಾಮೀಣ ನೀರು ಸರಬರಾಜು ಹಾಗೂ ನೈರ್ಮಾಲ್ಯ ಇಲಾಖೆಯ ಅಧಿಕಾರಿ ಸುರೇಶರವರನ್ನು ಪ್ರೇಶ್ನೆ ಮಾಡಿದರು.

ಪ್ರಗತಿ ಪರಿಶೀಲನೆ ಸಭೆಗೆ ತಹಸೀಲ್ದಾರ್ ಭೀಮರಾಯ ಬಿ.ರಾಮಸಮುದ್ರ, ತಾ.ಪಂ.ಇ.ಓ. ಖಾಲೀದ್ ಅಹಮ್ಮದ್ ಸೇರಿದಂತೆ ತಾಲೂಕಿನ ವಿವಿಧ ಇಲಾಖೆಗಳ ತಾಲೂಕು ಮಟ್ಟದ ಅಧಿಕಾರಿಗಳು ತಮ್ಮ ಇಲಾಖೆಗಳ ಪ್ರಗತಿಯ ಕುರಿತು ಮಾಹಿತಿ ನೀಡಿದರು.

ನೂತನವಾಗಿ ಕೆ.ಡಿ.ಪಿ. ನಾಮನಿರ್ದೇಶನ ಗೊಂಡಿರುವ ಸದಸ್ಯರಾದ ರಮೇಶಕುರ್ಡಿ ಹಾಗೂ ಹನುಮಂತು ರವರನ್ನು ಸನ್ಮಾನಿಸಿ ಗೌರವಿಸಲಾಯಿತು.

# ಭಾರತ-ಅಮೆರಿಕ ಮಾತುಕತೆ

ಸಹಾಯಕ ವ್ಯಾಪಾರ ಪ್ರತಿನಿಧಿಯಾಗಿದ್ದಾರೆ.ಡೊನಾಲ್ಡ್‌ಟ್ರಂಪ್ ಅವರು ಭಾರತದ ಮೇಲಿನ ಉತ್ಪನ್ನಗಳಿಗೆ ಶೇ. 50 ರಷ್ಟು ಸುಂಕ ಹೇರಿದ್ದರಿಂದ ಎರಡೂ ದೇಶಗಳ ನಡುವಿನ ವ್ಯಾಪಾರ ಒಪ್ಪಂದ ಮಾತುಕತೆ ವಿಚಾರದಲ್ಲಿ ಅನಿಶ್ಚಿತತೆ ತಲೆದೋರಿತ್ತು.

ರಷ್ಯಾದಿಂದ ತೈಲ ಖರೀದಿಗೆ ದಂಡ ವಿಧಿಸುವುದೂ ಸೇರಿದಂತೆ ಭಾರತೀಯ ಸರಕುಗಳ ಮೇಲೆ ಅಮೆರಿಕ ಶೇ. 50ರಷ್ಟು ಸುಂಕ ವಿಧಿಸಿದ್ದರಿಂದ ಅಮೆರಿಕ-ಭಾರತ ನಡುವಿನ ವ್ಯಾಪಾರ ಒಪ್ಪಂದದ ಮೇಲೆ ಪರಿಣಾಮ ಬೀರಿತ್ತು. ಆದರೆ, ಅಮೆರಿಕದ ಈ ಸುಂಕದ ತೆರಿಗೆಯನ್ನು ಒಪ್ಪಲು ಸಾಧ್ಯವಿಲ್ಲ ಎಂದು ಭಾರತ ತಿರುಗೇಟು ನೀಡಿತ್ತು.ಈ ಬೆಳವಣಿಗೆಯ ನಂತರ ಭಾರತ ಪ್ರಧಾನಿ ನರೇಂದ್ರ ಮೋದಿ ಬಗ್ಗೆ ಡೊನಾಲ್ಡ್‌ಟ್ರಂಪ್ ಅವರು ತಾವು ಉತ್ತಮ ಸ್ನೇಹಿತರೊಬ್ಬರನ್ನು ಕಳೆದುಕೊಂಡಿದ್ದೇನೆ ಎಂದು ಪ್ರತಿಕ್ರಿಯಿಸಿದ್ದರು. ಇದಕ್ಕೆ ಪ್ರತಿಯಾಗಿ ಪ್ರಧಾನಿ ನರೇಂದ್ರಮೋದಿ ಅವರು ಟ್ರಂಪ್ ಅವರೊಂದಿಗೆ ಮಾತುಕತೆ ನಡೆಸಲು ಉತ್ಸುಕರಾಗಿರುವುದಾಗಿ ಸಕರಾತ್ಮಕವಾಗಿ ಪ್ರತಿಕ್ರಿಯಿಸಿದರು.ಇದುವರೆಗೂ ಭಾರತ-ಅಮೆರಿಕ ದ್ವಿಪಕ್ಷೀಯ ವ್ಯಾಪಾರ ಒಪ್ಪಂದ ಕುರಿತಂತೆ 5 ಸುತ್ತಿನ ಸಮಾಲೋಚನೆಗಳು ನಡೆದಿವೆ. 6ನೇ ಸುತ್ತಿನ ಮಾತುಕತೆ ಆ. 25 ರಿಂದ 29ರವರೆಗೆ ನಿಗದಿಯಾಗಿತ್ತು. ಆದರೆ, ಅಮೆರಿಕ ಭಾರತದ ಉತ್ಪನ್ನಗಳ ಮೇಲೆ ಅಮೆರಿಕ ಶೇ. 50ರಷ್ಟು ಸುಂಕ ವಿಧಿಸಿದ್ದರಿಂದ ಉಭಯ ದೇಶಗಳ ನಡುವಣ ಮಾತುಕತೆ ಮುಂದೂಡಲಾಯಿತು.

# ದೇವದುರ್ಗದಲ್ಲಿ ನವರಾತ್ರಿ ಉತ್ಸವ ಸಭೆ: ಸಿದ್ಧತೆಗಳು ಆರಂಭ



ಯುವ ಮಾರ್ಗ ಸುದ್ದಿ

**ದೇವದುರ್ಗ,ಸೆ.16–** ಗಾಂಧಿ ಚೌಕ್‌ನ ನವರಾತ್ರಿ ಉತ್ಸವ ಸಮಿತಿಯು ಈ ಬಾರಿ ಶ್ರೀಸಿದ್ದರಾಮೇಶ್ವರ ಶಿಖರ ಮಠದಲ್ಲಿ ನವರಾತ್ರಿ ಆಚರಣೆ ಕುರಿತು ಸಭೆಯನ್ನು ನಡೆಸಿತು. ಸಭೆಯಲ್ಲಿ ಶ್ರೀ ಷ.ಬ್ರ. ಅಭಿನವ ಕಪಿಲ ಸಿದ್ದರಾಮೇಶ್ವರ ಶಿವಾಚಾರ್ಯರ ನೇತೃತ್ವದಲ್ಲಿ ಎರಡನೇ ವರ್ಷದ ನವರಾತ್ರಿ ಉತ್ಸವವನ್ನು ಅದ್ದೂರಿಯಾಗಿ ಆಚರಿಸಲು ನಿರ್ಧರಿಸಲಾಗಿದೆ.

ಈ ಕುರಿತು ಮಾತನಾಡಿದ ಸಮಿತಿಯ ಗೌರವ ಅಧ್ಯಕ್ಷರಾದ ಶ್ರೀತಿರುಮಲ ಆಚಾರ್ಯ, ಈ ಉತ್ಸವವನ್ನು ಎಲ್ಲಾ ಸಮುದಾಯಗಳ ಸಹಭಾಗಿತ್ವದಲ್ಲಿ ನಡೆಸಲಾಗುವುದು ಎಂದರು. ಸಾರ್ವಜನಿಕರು ಈ ಧಾರ್ಮಿಕ ಕಾರ್ಯದಲ್ಲಿ ತನು, ಮನ, ಧನ ಸಹಾಯ ನೀಡಿ ದೇವಿಯ ಕೃಪೆಗೆ ಪಾತ್ರರಾಗಬೇಕೆಂದು ಅವರು ವಿನಂತಿಸಿದರು.

ಸಭೆಯಲ್ಲಿ ವಾಸುದೇವ ನಾಯಕ, ವೆಂಕಟೇಶ ಚಿಂತಲಕುಂಟಾ, ವೀರೇಶ ಗೌಳಿ, ಸೋಮಣ್ಣ ಜ್ಯೋತಿ, ವೀರುಪಾಕ್ಷಿ, ಗೌರಿ ಶಂಕರ, ಸಂಗಮೇಶ, ಅಭಿ ಜಾದವ್, ಪವನ, ರಮೇಶ್ ಇಂಗಳದಾಳ್, ಹಾಗೂ ರಮೇಶ್ ಗೌಳಿ ಸೇರಿದಂತೆ ಸಮಿತಿಯ ಅನೇಕ ಸದಸ್ಯರು ಉಪಸ್ಥಿತರಿದ್ದರು. ಈ ಬಾರಿ ಉತ್ಸವವನ್ನು ಇನ್ನಷ್ಟು ವಿಜೃಂಭಣೆಯಿಂದ ನಡೆಸಲು ಹಲವು ಸಿದ್ಧತೆಗಳನ್ನು ಆರಂಭಿಸಲಾಗಿದೆ.

# ಡಿ. ರಾಂಪುರು ಸರ್ಕಾರಿ ಪ್ರೌಢಶಾಲೆಯಲ್ಲಿ ಶುದ್ಧ ಕುಡಿಯುವ ನೀರು, ಕೈ ತೊಳೆಯುವ ಕಟ್ಟೆ ಉದ್ಘಾಟನೆ




ಯುವ ಮಾರ್ಗ ಸುದ್ದಿ

**ರಾಯಚೂರು,ಸೆ.16 –** ರಾಯಚೂರು ತಾಲೂಕಿನ ಡಿ. ರಾಂಪುರು ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ಇಂದು ಮಕ್ಕಳಿಗೆ ಶುದ್ಧ ಕುಡಿಯುವ ನೀರು ಹಾಗೂ ಕೈ ತೊಳೆಯುವ ಕಟ್ಟೆಯನ್ನು ಉದ್ಘಾಟಿಸಲಾಯಿತು. ಸ್ವಾಮಿ ವಿವೇಕಾನಂದ ಯೂತ್ ಮೂವ್ ಮೆಂಟ್ (ಮೈಸೂರು) ಮತ್ತು ಲಿಂಗ್‌ಸ್ಟೋಮ್ ಸರ್ವೀಸ್ ಪ್ರೈವೇಟ್ ಲಿಮಿಟೆಡ್ ಸಹಯೋಗದಲ್ಲಿ ಹಾಗೂ ಸ್ಥಳೀಯ ಸಮುದಾಯದ ಸಹಕಾರದೊಂದಿಗೆ ಈ ವ್ಯವಸ್ಥೆಯನ್ನು ನಿರ್ಮಿಸಲಾಗಿದೆ.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ರಾಯಚೂರು ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿ ಈರಣ್ಣ ಕೊಸಗಿ, "ಸ್ವಾಮಿ ವಿವೇಕಾನಂದ ಸಂಸ್ಥೆಯು ಸರ್ಕಾರಿ ಅನುದಾನವಿಲ್ಲದೆ ವಿವಿಧ ಕಂಪನಿಗಳ ನೆರವಿನಿಂದ ಶಾಲೆಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸುತ್ತಿದೆ. ಮೈಸೂರಿನಿಂದ ಬಂದು ನಮ್ಮ ಜಿಲ್ಲೆಯನ್ನು ಆಯ್ಕೆ ಮಾಡಿಕೊಂಡು ಈ ರೀತಿಯ ಪುಣ್ಯದ ಕೆಲಸ ಮಾಡುತ್ತಿರುವುದು ಶ್ಲಾಘನೀಯ. ಈಗಾಗಲೇ ದೇಶಾದ್ಯಂತ 108 ಇಂತಹ ಘಟಕಗಳನ್ನು ನಿರ್ಮಿಸಿದೆ ಎಂದು ತಿಳಿದುಬಂದಿದೆ. ಇದರ ಸಂರಕ್ಷಣೆ ನಮ್ಮೆಲ್ಲರ ಜವಾಬ್ದಾರಿಯಾಗಿದೆ. ಸಣ್ಣಪುಟ್ಟ ರಿಪೇರಿಗಳು ಬಂದಾಗ ದುರಸ್ತಿ ಮಾಡಿದರೆ ಇದು ದೀರ್ಘಕಾಲ ಬಾಳಿಕೆ ಬರುತ್ತದೆ" ಎಂದು ಹೇಳಿದರು.

ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್‌ನ ಆರ್ಥಿಕ ಮತ್ತು ಸಾಮಾಜಿಕ ಸಬಲೀಕರಣ ವಿಭಾಗದ ನಿರ್ದೇಶಕ ಡಾ. ಡೆನಿಸ್ ಚೌಹಾನ್ ಮಾತನಾಡಿ, "ಕಳೆದ 12 ವರ್ಷಗಳಿಂದ ರಾಯಚೂರು ಜಿಲ್ಲೆಯಲ್ಲಿ ನಮ್ಮ ಸಂಸ್ಥೆಯು ನೀರು ನೈರ್ಮಲ್ಯ, ಮಹಿಳಾ ಸಬಲೀಕರಣ ಮತ್ತು ಕೌಶಲ್ಯ ತರಬೇತಿ ಕಾರ್ಯಕ್ರಮಗಳನ್ನು ನಡೆಸುತ್ತಿದೆ. ಡಿ. ರಾಂಪುರು ಶಾಲೆಯಲ್ಲಿ ನಿರ್ಮಿಸಿರುವ ಈ ಅದ್ಭುತವಾದ ವ್ಯವಸ್ಥೆಯು ನಿರಂತರವಾಗಿ ಕಾರ್ಯನಿರ್ವಹಿಸಬೇಕಾದರೆ, ಒಂದು ಸಮಿತಿಯನ್ನು ರಚಿಸಿ ಅದರ ಸಂರಕ್ಷಣೆ ಮಾಡುವುದು ಅತ್ಯಗತ್ಯ. ಇದು ಸುಸ್ಥಿರವಾಗಿ ಉಳಿಯಬೇಕು ಎಂಬುದು ನಮ್ಮ ಮತ್ತು ಹಣಕಾಸು ನೆರವು ನೀಡಿದ ಕಂಪನಿಯ ಆಶಯವಾಗಿದೆ" ಎಂದರು.

ಮಾಜಿ ಜಿಲ್ಲಾ ಪಂಚಾಯತ್ ಸದಸ್ಯ ಅಚ್ಚುತ ರೆಡ್ಡಿ, "ಈ ಶಾಲೆಗೆ ಅನೇಕ ಸಂಘ ಸಂಸ್ಥೆಗಳು ಭೇಟಿ ನೀಡಿ ಈ ರೀತಿಯ ಸಾಮಾಜಿಕ ಕಾರ್ಯಗಳನ್ನು ಮಾಡಿರುವುದು ಉತ್ತಮ ಬೆಳವಣಿಗೆ. ಈ ಸಂಸ್ಥೆ ಪ್ರಾಥಮಿಕ ಶಾಲೆಯಲ್ಲಿಯೂ ಇದೇ ರೀತಿಯ ಕಾರ್ಯಕ್ರಮ ನಡೆಸಿತ್ತು, ಅಲ್ಲಿನ ಶಿಕ್ಷಕರ ಕಾಳಜಿಯಿಂದ ಇಂದಿಗೂ ಅದು ಬಳಕೆಯಲ್ಲಿದೆ. ಇಲ್ಲಿಯೂ ಇದರ ರಕ್ಷಣೆಯ ಜವಾಬ್ದಾರಿ ನಿಮ್ಮ ಮೇಲಿದೆ" ಎಂದರು. ಸಮುದಾಯದ ಸಹಭಾಗಿತ್ವದಿಂದ ಮಾತ್ರ ಇಂತಹ ಸುಂದರ ಕೆಲಸಗಳು ಸಾಧ್ಯ ಎಂದು ಅವರು ಹೇಳಿದರು. ಗ್ರಾಮ ಪಂಚಾಯತ್ ಕೂಡ ಶಾಲೆಯ ಅಗತ್ಯತೆಗಳನ್ನು ಗುರುತಿಸಿ ಸಹಕರಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಭೂದಾನಿಗಳಾದ ವೆಂಕಟರೆಡ್ಡಿ, ಗ್ರಾಮ ಪಂಚಾಯತ್ ಅಧ್ಯಕ್ಷರು, ಸದಸ್ಯರು, ಶಿಕ್ಷಣ ಪ್ರೇಮಿಗಳು, ಎಸ್‌ಡಿಎಂಸಿ ಸದಸ್ಯರು, ಗೋವಿಂದು, ಶಾಲೆಯ ಮುಖ್ಯ ಶಿಕ್ಷಕ ಶರಣಪ್ಪ ಮತ್ತು ಇತರ ಶಿಕ್ಷಕರು ಹಾಗೂ ಮಕ್ಕಳು ಉಪಸ್ಥಿತರಿದ್ದರು.

# ಇಂದಿನಿಂದ 3 ದಿನ ರಾಯಚೂರ ಜಿಲ್ಲೆಯಲ್ಲಿ ಮಹಿಳಾ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮೀ ಚೌಧರಿ ಪ್ರವಾಸ

ಯುವ ಮಾರ್ಗ ಸುದ್ದಿ

**ರಾಯಚೂರು,ಸೆ.16–** ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ ಡಾ.ನಾಗಲಕ್ಷ್ಮೀ ಚೌಧರಿ ಅವರು ಸೆಪ್ಟೆಂಬರ್ 17ರಿಂದ ಸೆ.19ರವರೆಗೆ ರಾಯಚೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿದ್ದಾರೆ.

ಸೆ.17ರ ಬೆಳಿಗ್ಗೆ 7 ಗಂಟೆಗೆ ಕಲಬುರಗಿ ನಗರದಿಂದ ನಿರ್ಗಮಿಸಿ ಬೆಳಿಗ್ಗೆ 10.30ಕ್ಕೆ ರಾಯುಚೂರ ನಗರಕ್ಕೆ ಆಗಮಿಸುವರು. ಅಂದು ಬೆಳಿಗ್ಗೆ 11 ಗಂಟೆಗೆ ರಾಯಚೂರಿನ ಎಸ್‌ಎಸ್‌ಆರ್‌ಜಿ ಮಹಿಳಾ ವಿಶ್ವವಿದ್ಯಾಲಯದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಪೊಲೀಸ್ ಹಾಗೂ ಮಹಿಳಾ ಮಕ್ಕಳ ಅಭಿವೃದ್ಧಿ ಇಲಾಖೆ ಸಹಯೋಗದಲ್ಲಿ ನಡೆಯುವ ಪಿಯು ಹಾಗೂ ಪದವಿ ವಿದ್ಯಾರ್ಥಿನಿಯರೊಂದಿಗಿನ ಸಂವಾದ ಕಾರ್ಯಕ್ರಮದಲ್ಲಿ ಭಾಗಿಯಾಗುವರು. ಮಧ್ಯಾಹ್ನ 1 ಗಂಟೆಗೆ ಎಸ್‌ಎಸ್‌ಆರ್‌ಜಿ ಕಾಲೇಜಿನಿಂದ ನಿರ್ಗಮಿಸಿ ಮಧ್ಯಾಹ್ನ 1.30ಕ್ಕೆ ರಾಯಚೂರು ಜಿಲ್ಲಾಸ್ಪತ್ರೆಗೆ ಭೇಟಿ ನೀಡುವರು. ಅಲ್ಲಿಂದ 2.30ಕ್ಕೆ ನಿರ್ಗಮಿಸಿ ಮಧ್ಯಾಹ್ನ 3 ಗಂಟೆಗೆ ರಾಯಚೂರು ತಾಲೂಕಿನ ಯರಗೇರಾ ಗ್ರಾಮದ ಬಳಿಯಲ್ಲಿನ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯಕ್ಕೆ ಭೇಟಿ ನೀಡುವರು. ಸಂಜೆ 5.30ಕ್ಕೆ ರಾಯಚೂರಿನ ಸಮಾಜ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಬಾಲಕಿಯರ ಮೆಟ್ರಿಕ್ ನಂತರದ ವಸತಿ ನಿಲಯಗಳಿಗೆ ಭೇಟಿ ನೀಡಿ ರಾಯಚೂರಿನಲ್ಲಿ ವಾಸ್ತವ್ಯ ಮಾಡುವರು.

ಸೆ.18ರ ಬೆಳಿಗ್ಗೆ 10 ಗಂಟೆಗೆ ರಾಯಚೂರಿನ ರಂಗಮಂದಿರದಲ್ಲಿ ಕಲಾ ಸಂಕುಲ ಸಂಸ್ಥೆ ಹಮ್ಮಿಕೊಂಡ ರಾಜ್ಯಮಟ್ಟದ ಶಿಕ್ಷಕರ ದಿನಾಚರಣೆಯ ಸಮಾರಂಭದಲ್ಲಿ ಭಾಗಿಯಾಗುವರು. 10.30ಕ್ಕೆ ಜಿಲ್ಲಾ ರಂಗಮಂದಿರದಿಂದ ನಿರ್ಗಮಿಸಿ ಮಧ್ಯಾಹ್ನ 12.30ಕ್ಕೆ ಸಿಂಧನೂರ ನಗರಕ್ಕೆ ಹೊರಟು ಸಿಂಧನೂರಿನ ಸುಕ್ಕಲಪೇಟೆ ರಸ್ತೆಯಲ್ಲಿರುವ ರಂಗಮಂದಿರದಲ್ಲಿ ಸಿಂದೋಳ ಸಮುದಾಯದ ಅಲೆಮಾರಿ ಮಹಿಳೆಯರು ಮತ್ತು ದೇವದಾಸಿ ಮಹಿಳೆಯರೊಂದಿಗೆ ಸಂವಾದ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಮಧ್ಯಾಹ್ನ 3 ಗಂಟೆಗೆ ಸಿಂಧನೂರು ತಾಲೂಕು ಆಸ್ಪತ್ರೆಗೆ ಭೇಟಿ ನೀಡುವರು. ಸಂಜೆ 4 ಗಂಟೆಗೆ ಸಿಂಧನೂರು ಪೊಲೀಸ್ ಠಾಣೆಗೆ ಭೇಟಿ ನೀಡುವರು. ಸಂಜೆ 5 ಗಂಟೆಗೆ ಸಿಂಧನೂರ ನಗರದಿಂದ ನಿರ್ಗಮಿಸಿ ಸಂಜೆ 7 ಗಂಟೆಗೆ ರಾಯಚೂರ ನಗರಕ್ಕೆ ಆಗಮಿಸಿ ವಾಸ್ತವ್ಯ ಮಾಡುವರು.

ಸೆ.19ರ ಬೆಳಗ್ಗೆ 11 ಗಂಟೆಗೆ ರಾಯಚೂರ ನಗರದಲ್ಲಿ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಹಮ್ಮಿಕೊಂಡ ಮಹಿಳೆಯರೊಂದಿಗೆ ಮಹಿಳಾ ಸ್ಪಂದನಾ ಮತ್ತು ಮಹಿಳಾ ಪ್ರಗತಿ ಪರಿಶೀಲನಾ ಸಭೆ ನಡೆಸುವರು. ಸಂಜೆ 4 ಗಂಟೆಗೆ ಪತ್ರಿಕಾಗೋಷ್ಠಿ ನಡೆಸುವರು. ರಾತ್ರಿ 9 ಗಂಟೆಗೆ ರಾಯಚೂರ ನಗರದಿಂದ ನಿರ್ಗಮಿಸಿ ರೈಲು ಮಾರ್ಗವಾಗಿ ಕೇಂದ್ರ ಸ್ಥಾನ ಬೆಂಗಳೂರಿಗೆ ಪ್ರಯಾಣ ಬೆಳೆಸುವರು ಎಂದು ಅಧ್ಯಕ್ಷರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರಜಾಪ್ರಭುತ್ವ ವ್ಯವಸ್ಥೆಯ ಸಫಲತೆಯಿಂದ ಸದೃಢ ರಾಷ್ಟ್ರ ನಿರ್ಮಾಣ

**ಕಲಬುರಗಿ,ಸೆ.16–** ಪ್ರಜೆಗಳಿಂದ, ಪ್ರಜೆಗಳಿಗಾಗಿ, ಪ್ರಜೆಗಳೇ ಆಳಲ್ಪಡುವ ಅದ್ಭುತ ವ್ಯವಸ್ಥೆಯೇ ಪ್ರಜಾಪ್ರಭುತ್ವವಾಗಿದೆ. ಪ್ರಜೆಗಳೇ ಪ್ರಭುಗಳಾಗಿದ್ದು, 'ಮತದಾನ'ವೆಂಬ ದೊಡ್ಡ ಅಸ್ತ್ರ ಹೊಂದಿದ್ದಾರೆ. ದೇಶ, ಧರ್ಮ, ಜಾತಿ, ಭಾಷೆ, ಪ್ರಾಂತ್ಯಗಳ ಆಧಾರದ ಮೇಲೆ ಮೇಲು-ಕೀಳು ಮಾಡದೆ, ನಾವೆಲ್ಲರೂ ಒಂದೇ ಎಂಬ ಭಾವನೆ ಮೂಡಬೇಕು. ದೇಶದ ಸಂವಿಧಾನ ಅಡಿಯಲ್ಲಿ ಕೆಲಸ ಮಾಡ ಬೇಕು.ಯಾವುದೇ ರಾಷ್ಟ್ರದಲ್ಲಿ ಪ್ರಜಾಪ್ರಭುತ್ವ ವ್ಯವಸ್ಥೆಯ ಸಫಲತೆ ಯಿಂದ ಮಾತ್ರ ಸದೃಢ ರಾಷ್ಟ್ರ ನಿರ್ಮಾಣವಾಗಲು ಸಾಧ್ಯವಿದೆ ಎಂದು ಉಪನ್ಯಾಸಕ ಎಚ್.ಬಿ.ಪಾಟೀಲ ಹೇಳಿದರು.

ನಗರದ ಆಳಂದ ರಸ್ತೆಯ ಸಂತೋಷ ಕಾಲನಿ ಕ್ರಾಸ್ ಸಮೀಪದ 'ರಿಪಬ್ಲಿಕ್ ಸ್ಪೋಕನ್ ಇಂಗ್ಲೀಷ್ ಅಕಾಡೆಮಿ'ಯಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದಿಂದ ಸೋಮವಾರ ಸಂಜೆ ಏರ್ಪಡಿಸಲಾಗಿದ್ದ 'ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾ ಚರಣೆ'ಯಲ್ಲಿ ಮಾತನಾಡುತ್ತಿದ್ದ ಅವರು, ಸಂವಿಧಾನವು ಭಾರತವ ನ್ನು ಪ್ರಜಾಸತಾತ್ಮಕ ಗಣರಾಜ್ಯವೆಂದು ಸಾರಿದೆ. ರಾಷ್ಟ್ರದ ಅಭಿವೃದ್ಧಿ ಯಲ್ಲಿ ಸಂವಿಧಾನ ಮತ್ತು ಪ್ರಜಾಪ್ರಭುತ್ವದ ಮೌಲ್ಯಗಳು ತುಂಬಾ ಅವಶ್ಯಕವಾಗಿವೆ. ಇಡೀ ವಿಶ್ವದಲ್ಲಿಯೇ



ಅತ್ಯಂತ ದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರ ನಮ್ಮದಾಗಿದೆ. ಬೃಹತ ಸಂವಿಧಾನ, ಆಡಳಿತ ವ್ಯವಸ್ಥೆ ಹೊಂದಿದೆ. ಅದನ್ನು ಉಳಿಸಿಕೊಂಡು ಹೋಗುವ ಜವಾಬ್ದಾರಿ ನಮ್ಮೆಲ್ಲರದಾಗಿದೆ ಎಂದು ನುಡಿದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷ ದತ್ತು ಹಡಪದ, ಪ್ರಮುಖರಾದ ಡಾ.ರಾಜಶೇಖರ ಪಾಟೀಲ್, ಅಸ್ಲಾಂ ಶೇಖ್, ಶಿವಯೋಗೆಪ್ಪಾ ಎಸ್.ಬಿರಾದರ, ಸಿದ್ದು ಸರಡಗಿ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಭಾರತ-ಅಮೆರಿಕ ಮಾತುಕತೆ



**ನವದೆಹಲಿ,ಸೆ.16–**ಸುಂಕಾಸ್ತ್ರದಿಂದ ಎರಡೂ ದೇಶಗಳ ನಡುವಿನ ಬಾಂಧವ್ಯ ಹಳಸಿರುವ ಬೆನ್ನಲ್ಲೇ ಭಾರತ-ಅಮೆರಿಕ ನಡುವೆ ಮಹತ್ವದ ವ್ಯಾಪಾರ ಒಪ್ಪಂದ ಕುರಿತ ಮಾತುಕತೆ ದೆಹಲಿಯಲ್ಲಿ ಆರಂಭವಾಗಿರುವ ಬಗ್ಗೆ ಹಿರಿಯ ಅಧಿಕಾರಿಯೊಬ್ಬರು ಮಾಹಿತಿ ನೀಡಿದ್ದಾರೆ.

ನಿನ್ನೆ ರಾತ್ರಿ ಅಮೆರಿಕ ಅಧ್ಯಕ್ಷ ಡೊನಾಲ್ಡ್‌ಟ್ರಂಪ್, ಆಡಳಿತದ ಮುಖ್ಯಸಮಾಲೋಚಕ ಬ್ರೆಂಡನ್‌ಲಿಂಚ್ ಆಗಮಿಸಿದ್ದರು. ಈಗ ಉಭಯ ದೇಶಗಳ ನಡುವಿನ ವ್ಯಾಪಾರ ಸಂಬಂಧ ವೃದ್ಧಿಗೆ ಚರ್ಚೆಗಳು ನಡೆಯುತ್ತಿವೆ.

ಭಾರತದ ಮುಖ್ಯಸಮಾಲೋಚಕ ಮತ್ತು ವಾಣಿಜ್ಯ ಸಚಿವಾಲಯದ ವಿಶೇಷ ಕಾರ್ಯದರ್ಶಿ ರಾಜೇಶ್ ಅಗರ್‌ವಾಲ್ ಜತೆ ದಿನಪೂರ್ತಿ ಮಾತುಕತೆ ನಡೆಯಲಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.ಬ್ರೆಂಡೆನ್‌ಲಿಂಚ್ ಅವರುದಕ್ಷಿಣ ಮತ್ತು ಮಧ್ಯ ಏಷ್ಯದ ಅಮೆರಿಕದ ಸಹಾಯಕ ವ್ಯಾಪಾರ ಪ್ರತಿನಿಧಿಯಾಗಿದ್ದಾರೆ.

ಡೊನಾಲ್ಡ್‌ಟ್ರಂಪ್ ಅವರು ಭಾರತದ ಮೇಲಿನ ಉತ್ಪನ್ನಗಳಿಗೆ ಶೇ. 50 ರಷ್ಟು ಸುಂಕ ಹೇರಿದ್ದರಿಂದ ಎರಡೂ ದೇಶಗಳ ನಡುವಿನ ವ್ಯಾಪಾರ ಒಪ್ಪಂದ ಮಾತುಕತೆ ವಿಚಾರದಲ್ಲಿ ಅನಿಶ್ಚಿತತೆ ತಲೆದೋರಿತ್ತು.ರಷ್ಯಾದಿಂದ ತೈಲ ಖರೀದಿಗೆ ದಂಡ ವಿಧಿಸುವುದೂ ಸೇರಿದಂತೆ ಭಾರತೀಯ ಸರಕುಗಳ ಮೇಲೆ ಅಮೆರಿಕ ಶೇ. 50ರಷ್ಟು ಸುಂಕ ವಿಧಿಸಿದ್ದರಿಂದ ಅಮೆರಿಕ-ಭಾರತ ನಡುವಿನ ವ್ಯಾಪಾರ ಒಪ್ಪಂದದ ಮೇಲೆ ಪರಿಣಾಮ ಬೀರಿತ್ತು. ಆದರೆ, ಅಮೆರಿಕದ ಈ ಸುಂಕದ ತೆರಿಗೆಯನ್ನು ಒಪ್ಪಲು ಸಾಧ್ಯವಿಲ್ಲ ಎಂದು ಭಾರತ ತಿರುಗೇಟು ನೀಡಿತ್ತು.

ಈ ಬೆಳವಣಿಗೆಯ ನಂತರ ಭಾರತ ಪ್ರಧಾನಿ ನರೇಂದ್ರ ಮೋದಿ ಬಗ್ಗೆ ಡೊನಾಲ್ಡ್‌ಟ್ರಂಪ್ ಅವರು ತಾವು ಉತ್ತಮ ಸ್ನೇಹಿತರೊಬ್ಬರನ್ನು ಕಳೆದುಕೊಂಡಿದ್ದೇನೆ ಎಂದು ಪ್ರತಿಕ್ರಿಯಿಸಿದ್ದರು. ಇದಕ್ಕೆ ಪ್ರತಿಯಾಗಿ ಪ್ರಧಾನಿ ನರೇಂದ್ರಮೋದಿ ಅವರು ಟ್ರಂಪ್ ಅವರೊಂದಿಗೆ ಮಾತುಕತೆ ನಡೆಸಲು ಉತ್ಸುಕರಾಗಿರುವುದಾಗಿ ಸಕರಾತ್ಮಕವಾಗಿ ಪ್ರತಿಕ್ರಿಯಿಸಿದರು.

ಇದುವರೆಗೂ ಭಾರತ-ಅಮೆರಿಕ ದ್ವಿಪಕ್ಷೀಯ ವ್ಯಾಪಾರ ಒಪ್ಪಂದ ಕುರಿತಂತೆ 5 ಸುತ್ತಿನ ಸಮಾಲೋಚನೆಗಳು ನಡೆದಿವೆ. 6ನೇ ಸುತ್ತಿನ ಮಾತುಕತೆ ಆ. 25 ರಿಂದ 29ರವರೆಗೆ ನಿಗದಿಯಾಗಿತ್ತು. ಆದರೆ, ಅಮೆರಿಕ ಭಾರತದ ಉತ್ಪನ್ನಗಳ ಮೇಲೆ ಅಮೆರಿಕ ಶೇ. 50ರಷ್ಟು ಸುಂಕ ವಿಧಿಸಿದ್ದರಿಂದ ಉಭಯ ದೇಶಗಳ ನಡುವಣ ಮಾತುಕತೆ ಮುಂದೂಡಲಾಯಿತು.

**ಪ್ರತಿನಿಧಿಗಳ ಮಟ್ಟದಲ್ಲಿ ಮಾತುಕತೆ :** ವ್ಯಾಪಾರ ಮಾತುಕತೆ ಸಂಬಂಧ ಅಮೇರಿಕಾ- ಭಾರತದ ಪ್ರತಿನಿಧಿಗಳ ಮಟ್ಟದಲ್ಲಿ ಮಾತುಕತೆ ನಡೆಯುತ್ತಿದೆ ಎಂದು ಅಮೇರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ವ್ಯಾಪಾರ ಸಲಹೆಗಾರ ಪೀಟರ್ ನವರೊ ಹೇಳಿದ್ದಾರೆ.

ಅಮೆರಿಕದ ವ್ಯಾಪಾರ ಇಲಾಖೆಯ ಮುಖ್ಯ ಸಮಾಲೋಚಕರು ಭಾರತದೊಂದಿಎ ವ್ಯಾಪಾರ ಒಪ್ಪಂದದ ಕುರಿತು ದಿನವಿಡೀ ಮಾತುಕತೆಗೆ ನಡೆಸಿ ಅಂತಿಮವಾಗಿ ನಿರ್ಧಾರಕ್ಕೆ ಬರಲಿದ್ದಾರೆ ಎಂದಿದ್ದಾರೆ.

ಡೊನಾಲ್ಡ್ ಟ್ರಂಪ್ ಅವರ ಸೂಚನೆ ಮೇರೆಗೆ ಈ ಮಾತುಕತೆ ನಡೆಯುತ್ತಿದೆ. ಉಭಯ ದೇಶಗಳ ನಡಯವೆ ದ್ವಿಪಕ್ಷೀಯ ವ್ಯಾಪಾರ ಒಪ್ಪಂದದ ಕುರಿತು ಅಂತಿಮ ನಿರ್ಧಾರಕ್ಕೆ ಬರುವ ನಿರೀಕ್ಷೆ ಇದೆ ಎಂದಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರು ಕೂಡ ವ್ಯಾಪಾರ ಮಾತುಕತೆಯ ಬಗ್ಗೆ ಸಕಾರಾತ್ಮಕ ಪ್ರತಿಕ್ರಿಯೆ ವ್ಯಕ್ತಪಡಿಸಿದ್ದಾರೆ. ಹೀಗಾಗಿ ಉಭಯ ದೇಶಗಳ ನಡುವೆ ನಡೆಯುವ ನಿಯೋಗ ಮಟ್ಟದ ಮಾತುಕತೆ ಫಲಪ್ರದವಾಗುವ ನಿರೀಕ್ಷೆ ಇದೆ ಎಂದು ಹೇಳಿದ್ದಾರೆ.

ಕಳೆದವಾರ ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಭಾರತ ಮತ್ತು ಅಮೆರಿಕಾ ನಡುವಿನ "ವ್ಯಾಪಾರ ಅಡೆತಡೆಗಳನ್ನು ಪರಿಹರಿಸಲು ಮಾತುಕತೆ ನಡೆಸಲಿದೆ ಎಂದು ಹೇಳಿದ್ದರು. ಅದರ ಮುಂದುವರೆದ ಭಾಗವಾಗಿ ಈ ಮಾತುಕತೆ ನಡೆಯುತ್ತಿದೆ ಎಂದು ತಿಳಿಸಿದ್ದಾರೆ.

# ವೈದ್ಯಕೀಯ ಸೀಟಿಗೆ ನಕಲಿ ಪ್ರಮಾಣ ಪತ್ರ



**ಬೆಂಗಳೂರು,ಸೆ.16–**ವೈದ್ಯಕೀಯ ಸೀಟು ಪಡೆಯಲು ತಾವು ಕಿವುಡರು ಎಂದು ಹೇಳಿಕೊಂಡು ನಕಲಿ ಅಂಗವಿಕಲರ ಪ್ರಮಾಣಪತ್ರ ಸಲ್ಲಿಸಿದ್ದ 21 ಅಭ್ಯರ್ಥಿಗಳು ಸಿಕ್ಕಿ ಬಿದ್ದಿದ್ದಾರೆ. ಈ ಸಂಬಂಧ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಪೊಲೀಸರಿಗೆ ದೂರು ನೀಡಿದೆ.

ಪ್ರಸಕ್ತ ಸಾಲಿನ ಯುಜಿಸಿಟಿ ಮತ್ತು ಯುಜಿ, ನೀಟ್ ಸೀಟ್ ಕೋರಿ21 ಅಭ್ಯರ್ಥಿಗಳು ವಿಕಲಚೇತನ ಕೋಟಾದಡಿ ಅರ್ಜಿ ಸಲ್ಲಿಸಿದ್ದರು. ಈ 21 ಮಂದಿ ಆರಂಭದಲ್ಲಿ ಅರ್ಜಿ ಸಲ್ಲಿಸದೆ ತಿದ್ದುಪಡಿ ಮೂಲಕ ಪಿಎಚ್ ಮೀಸಲಾತಿಯಡಿ ಸೀಟು ನೀಡುವಂತೆ ಕೋರಿದ್ದರು.

ಈ ಬಗ್ಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ಸಂಶಯ ವ್ಯಕತವಾಗಿದೆ. ಕಿವಿ ಕೇಳಿಸುವುದಿಲ್ಲ ಎಂದು ಅರ್ಜಿ ಹಾಕಿದ್ದ 21ಮಂದಿಯನ್ನು ನಿಯಮಾವಳಿಗಳ ಅನುಸಾರ ವಿಕ್ಟೋರಿಯಾ ಆಸ್ಪತ್ರೆಗೆ ಇವರನ್ನು ವೈದ್ಯಕೀಯ ಪರೀಕ್ಷೆಗಾಗಿ ಕಳುಹಿಸಿ ಕೊಡಲಾಯಿತು. ಈ ಆಸ್ಪತ್ರೆಯಲ್ಲಿ ಆಡಿಯೊ ಗ್ರಾಮ್ ಮತ್ತು ಅಂಗವಿಕಲತೆಯ ಪರೀಕ್ಷೆಗಾಗಿ ನಿಮ್ಹಾನ್ಸ್ ಆಸ್ಪತ್ರೆಗೆ ಕಳುಹಿಸಲಾಗಿತ್ತು.ಈ ವೇಳೆ ವೈದ್ಯಕೀಯ ಪರೀಕ್ಷೆಯಲ್ಲಿ ಅಕ್ರಮ ಸಾಬೀತಾಗಿದ್ದು,ನಕಲಿ ಅಂಗವಿಕಲ ಪ್ರಮಾಣಪತ್ರವನ್ನು ಸಲ್ಲಿಸಿರುವುದು ಪ್ರಾಧಿಕಾರದ ಗಮನಕ್ಕೆ ಬಂದಿದೆ. ಈ ಸಂಬಂಧ ಪ್ರಾಧಿಕಾರ ಮಲ್ಲೇಶ್ವರಂ ಪೊಲೀಸ್ ಠಾಣೆಗೆ ದೂರು ನೀಡಿದೆ.

ಈ 21 ಮಂದಿ ಅಭ್ಯರ್ಥಿಗಳು ವೈದ್ಯಕೀಯ ಮಂಡಳಿಯ ನಕಲಿ ಸಹಿ, ಸೀಲ್ ಬಳಸಿನಕಲಿ ಅಂಗವಿಕಲ ವೈದ್ಯಕೀಯ ಪ್ರಮಾಣಪತ್ರವನ್ನು ಸಲ್ಲಿಸಿದ್ದರು. ಇದರ ಜತೆಗೆ ಯುಡಿ ಐಡಿ ಕಾರ್ಡ್‌ನ್ನು ಹೆಚ್ಚಿನ ಸಂಖ್ಯೆಯಲ್ಲಿ ವಿಜಯನಗರ ಜಿಲ್ಲೆಯ ಹೊಸಪೇಟೆ ಸರ್ಕಾರಿ ಆಸ್ಪತ್ರೆಯಿಂದ ಪ್ರಮಾಣಪತ್ರ ಪಡೆದಿರುವುದು ಬಹಿರಂಗವಾಗಿದೆ.

ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಮೂಲ ದಾಖಲೆಗಳನ್ನು ಹಾಜರುಪಡಿಸುವಂತೆ 21 ಮಂದಿ ಅಭ್ಯರ್ಥಿಗಳಿಗೆ ನೋಟಿಸ್ ನೀಡಿತ್ತು. ಈ ಸಂದರ್ಭದಲ್ಲೂ ಅಕ್ರಮ ನಡೆದಿರುವುದು ಪತ್ತೆಯಾಗಿದೆ. ನಿಮ್ಹಾನ್ಸ್ ಆಸ್ಪತ್ರೆಯಿಂದ ವೈದ್ಯಕೀಯ ಪ್ರಮಾಣಪತ್ರ ಕೊಟ್ಟಿರುವುದು ನಕಲಿ ಪ್ರಮಾಣಪತ್ರ ಎಂಬುದು ದೃಢಪಟ್ಟಿದೆ.

21 ಮಂದಿ ಅಭ್ಯರ್ಥಿಗಳೂ ಸೇರಿದಂತೆ ಇನ್ನೂ ಐವರನ್ನು ಈ ಅಕ್ರಮ ಪಟ್ಟಿಗೆ ಸೇರಿಸಲಾಗಿದೆ. ದೂರು ದಾಖಲಿಸಿಕೊಂಡಿರುವ ಮಲ್ಲೇಶ್ವರಂ ಪೊಲೀಸರು ತನಿಖೆ ಚುರುಕುಗೊಳಿಸಿದ್ದಾರೆ.

# ಮುಸಲ್ಮಾನರ ವಿಷಯಗಳು ಇಲ್ಲದಿದ್ದರೆ ಬಿಜೆಪಿ ರಾಜಕೀಯ ಮಾಡಲು ಸಾಧ್ಯವಿಲ್ಲ : ಸಂತೋಷ್‌ಲಾಡ್ ಕಿಡಿ



**ಬೆಂಗಳೂರು, ಸೆ.16–** ಪಾಕಿಸ್ತಾನ, ಮುಸಲ್ಮಾನ ವಿಷಯಗಳು ಇಲ್ಲವೆಂದರೆ ಬಿಜೆಪಿಯವರಿಗೆ ರಾಜಕೀಯ ವ್ಯವಹಾರವೇ ಇಲ್ಲ. ಈ ವಿಷಯಗಳೇ ಬಿಜೆಪಿಯವರಿಗೆ ಜೀವಾಳ ಎಂದು ಕಾರ್ಮಿಕ ಸಚಿವ ಸಂತೋಷಲಾಡ್ ಲೇವಡಿ ಮಾಡಿದ್ದಾರೆ.

ವಿಧಾನಸೌಧದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪಹಲ್ಗಾಮ್ ದಾಳಿಯಾದಾಗ ಪ್ರಧಾನಮಂತ್ರಿ ನರೇಂದ್ರಮೋದಿ ಅವರು ಜೋರು ಭಾಷಣ ಮಾಡಿ, ನೀರು ಮತ್ತು ರಕ್ತ ಏಕಾಕಾಲಕ್ಕೆ ಹರಿಯಲು ಸಾಧ್ಯವಿಲ್ಲ ಎಂದಿದ್ದರು. ಈಗ ಪಾಕಿಸ್ತಾನದ ಜೊತೆ ಕ್ರಿಕೆಟ್ ಆಡುತ್ತಿದ್ದಾರೆ. ಇದನ್ನು ಬಿಜೆಪಿಯವರು ಏಕೆ ಪ್ರಶ್ನಿಸುತ್ತಿಲ್ಲ ಎಂದು ಕಿಡಿ ಕಾರಿದರು.

ಬಿಜೆಪಿಯವರಿಗೆ ನಾಚಿಕೆ, ಮಾನಮರ್ಯಾದೆ ಏನೂ ಇಲ್ಲ. ಪಾಕಿಸ್ತಾನದ ಜೊತೆಗಿನ ಎಲ್ಲಾ ವ್ಯಾಪಾರ ವಹಿವಾಟುಗಳನ್ನು ನಿಲ್ಲಿಸಿಬಿಡುತ್ತೇ?ವೆ, ಪಾಕಿಸ್ತಾನವನ್ನು ಮುಗಿಸಿ ಬಿಡುತ್ತೇವೆ, ಹಾಗೇ ಮಾಡುತ್ತೇವೆ ಹೀಗೆ ಮಾಡುತ್ತೇವೆ ಎಂದೆಲ್ಲಾ ಹೇಳಿದವರು ಇವತ್ತು ಮಾಡುತ್ತಿರುವುದು ಏನು ಕೇಂದ್ರ ಗೃಹ ಸಚಿವ ಅಮಿತ್ ಷಾ ಅವರ ಪುತ್ರ ಜೈ ಷಾ ಅವರ ಅಧ್ಯಕ್ಷತೆಯಲ್ಲಿರುವ ಭಾರತೀಯ ಕ್ರಿಕೆಟ್ ಮಂಡಳಿ ಪಾಕಿಸ್ತಾನದ ಜೊತೆ ನಮ ತಂಡ ಆಟವಾಡಲು ಅವಕಾಶ ನೀಡಿದೆ. ಇದನ್ನು ಬಿಜೆಪಿಯವರು ವಿರೋಧಿಸುತ್ತಿಲ್ಲ ಎಂದು ಹೇಳಿದರು.

ಬಿಜೆಪಿಯವರು ಏನೂ ಮಾಡಿದರೂ ಅದು ಅಂಗೀಕೃತ ಎಂಬಂತೆ ವರ್ತಿಸಲಾಗುತ್ತಿದೆ. ಕಾಂಗ್ರೆಸ್ ಯಾವುದೇ ನಿರ್ಧಾರ ತೆಗೆದುಕೊಂಡರೂ ಅದರಲ್ಲಿ ಮುಸಲಾನರು ಪಾಕಿಸ್ತಾನ ಎಂಬ ಹುಳುಕು ಹುಡುಕಿ ಟೀಕೆ ಮಾಡುತ್ತಾರೆ. ಇದೇ ಬಿಜೆಪಿಯವರ ಜೀವಾಳ. ಇದನ್ನು ಬಿಟ್ಟರೆ ಅವರಿಗೆ ಬದುಕಿಲ್ಲ ಎಂದು ಕಿಡಿ ಕಾರಿದರು.

ರಾಜ್ಯದಲ್ಲಿ ಒಂದು ಲಕ್ಷಕ್ಕೂ ಹೆಚ್ಚು ಬಿಪಿಎಲ್ ಕಾರ್ಡ್‌ಗಳನ್ನು ರದ್ದು ಮಾಡುತ್ತಿರುವ ಬಗ್ಗೆ ಪ್ರತಿಕ್ರಿಯಿಸಿರುವ ಅವರು, ಕೇಂದ್ರ ಸರ್ಕಾರದ ಮಾರ್ಗಸೂಚಿ ಪ್ರಕಾರ ಶೇ.65ರಷ್ಟು ಬಿಪಿಎಲ್ ಕಾರ್ಡ್‌ಗಳು ಇರಬೇಕು. ಆದರೆ ನಮ್ಮಲ್ಲಿ 90ಕ್ಕಿಂತಲೂ ಹೆಚ್ಚು ಬಿಪಿಎಲ್ ಕಾರ್ಡ್‌ಗಳಿವೆ. ಅರ್ಹರಿಗೆ ಬಿಪಿಎಲ್ ಸೌಲಭ್ಯ ದೊರಕಿಸಲು ಎಲ್ಲಾ ಸರ್ಕಾರಗಳು ಪ್ರಯತ್ನ ಮಾಡುತ್ತಲೇ ಇವೆ.

ಅನರ್ಹರು ಸೌಲಭ್ಯ ಪಡೆದಿರುವುದನ್ನು ಪತ್ತೆ ಹಚ್ಚಲು ಪರಿಶೀಲನೆ ನಡೆಸಲಾಗುತ್ತಿದೆ ಎಂದರು.ರಾಜ್ಯದಲ್ಲಿ ಒಂದೆಡೆ ಬಿಪಿಎಲ್ ಕಾರ್ಡ್‌ಗಳ ಸಂಖ್ಯೆ ಹೆಚ್ಚಿದ್ದರೂ ದೇಶದಲ್ಲೆ? ಅತೀ ಹೆಚ್ಚು ತೆರಿಗೆ ಪಾವತಿ ಮಾಡುತ್ತಿರುವ ರಾಜ್ಯ ಕರ್ನಾಟಕವಾಗಿದೆ. ತಲಾ ಆದಾಯದಲ್ಲೂ ದೇಶದಲ್ಲಿ ನಂ.1 ಸ್ಥಾನದಲ್ಲಿದ್ದೇವೆ. ಇದಕ್ಕೆ ಗ್ಯಾರಂಟಿ ಯೋಜನೆಗಳ ಕೊಡುಗೆಯೂ ಮಹತ್ವದ್ದಾಗಿದೆ ಎಂದು ಹೇಳಿದರು.ಮೃತಪಟ್ಟ ಮಹಿಳೆಯ ಖಾತೆಗೆ ಗೃಹಲಕ್ಷ್ಮಿ ಯೋಜನೆಯ ಹಣ ಪಾವತಿಯಾಗಿರುವುದು ಸಹಜ. ಇದು ದೊಡ್ಡ ಪ್ರಮಾಣದ ಯೋಜನೆ. ಸಣ್ಣ ಪ್ರಮಾಣದ ಲೋಪಗಳು ಇರಬಹುದು. ಪ್ರತಿವಾರ ಸಾವು-ನೋವುಗಳು ಘಟಿಸುತ್ತಿರುತ್ತವೆ. ಆ ಮಾಹಿತಿ ಕಾಲಕಾಲಕ್ಕೆ ಅಪ್‌ಡೇಟ್ ಆಗದೇ ಇದ್ದಾಗ ಲೋಪಗಳಾಗುವುದು ಸಾಮಾನ್ಯ. ಸರ್ಕಾರ ಇದನ್ನು ಪತ್ತೆ ಹಚ್ಚಿ ಸೂಕ್ತ ಕ್ರಮಕೈಗೊಳ್ಳಲಿದೆ ಎಂದು ಹೇಳಿದರು.

# ಜೀವನ ಮೌಲ್ಯಗಳು ಬಹಳ ಮುಖ್ಯ: ಪ್ರೊ.ಬಟ್ಟು ಸತ್ಯನಾರಾಯಣ



**ಕಲಬುರಗಿ,ಸೆ.16–**"ಪ್ರಸ್ತುತ ಸಂಕೀರ್ಣ ಜಗತ್ತಿನಲ್ಲಿ ಜೀವನ ಕೌಶಲ್ಯಗಳು ಬಹಳ ಮುಖ್ಯ" ಎಂದು ಸಿಯುಕೆಯ ಗೌರವಾನ್ವಿತ ಕುಲಪತಿ ಪ್ರೋ. ಬಟ್ಟು ಸತ್ಯನಾರಾಯಣ ಹೇಳಿದರು.

ಇಂದು ಅವರು ಸಿಯುಕೆಯ ಸಮಾಜ ಕಾರ್ಯ ಇಲಾಖೆ ಆಯೋಜಿಸಿದ್ದ ಹತ್ತು ದಿನಗಳ ಜೀವನ ಕೌಶಲ್ಯ ತರಬೇತಿ ಕಾರ್ಯಗಾರ -2025 ಉದ್ಘಾಟಿಸಿದ ನಂತರ ಮಾತನಾಡುತ್ತಿದ್ದರು.

ಅವರು ಮುಂದುವರೆದು ಮಾತನಾಡಿ "ಹಿಂದೆ ನಮ್ಮ ಸಮಾಜವು ಹೆಚ್ಚು ಸುರಕ್ಷಿತ ಮತ್ತು ಸರಳವಾಗಿತ್ತು. ನಾವು ನಮ್ಮ ಹಿರಿಯರ ರಕ್ಷಣೆಯಲ್ಲಿ ಬದುಕುತ್ತಿದ್ದೆವು. ಆದರೆ ಇಂದು ಆಧುನೀಕರಣ ಮತ್ತು ವಿಭಕ್ತ ಕುಟುಂಬಗಳ ಕಡೆಗೆ ನಮ್ಮ ನಡಿಗೆಯಿಂದ ನಮ್ಮನ್ನು ನಾವು ಹೆಚ್ಚಿನ ಸಂಕೀರ್ಣತೆಗಳು ಮತ್ತು ಅಪಾಯಗಳಿಗೆ ಒಡ್ಡಿದೆವೆ. ಆದ್ದರಿಂದ ನಮ್ಮ ಜೀವನವನ್ನು ಪರಿಣಾಮಕಾರಿಯಾಗಿ ನಿರ್ವಹಿಸಲು ನಾವು ಜೀವನ ಕೌಶಲ್ಯಗಳನ್ನು ಹೊಂದುವುದು ಅವಶ್ಯ. ವಿಶೇಷವಾಗಿ ನಿಮ್ಮಂತಹ ಸಾಮಾಜಿಕ ಕಾರ್ಯ ವೃತ್ತಿಪರರು ಭಾರತೀಯ ಸಮಾಜ ಎದುರಿಸುತ್ತಿರುವ ಸವಾಲುಗಳಿಗೆ ಸುಸ್ಥಿರ ಪರಿಹಾರಗಳನ್ನು ಕಂಡುಕೊಳ್ಳುವ ಹೆಚ್ಚಿನ ಜವಾಬ್ದಾರಿಯನ್ನು ಹೊಂದಿದ್ದಿರಿ. ಈ ತರಬೇತಿಯ ಮೂಲಕ ಗಳಿಸಿದ ನಿಮ್ಮ ಜ್ಞಾನವನ್ನು ನೈಜ-ಪ್ರಪಂಚದ ಸಾಮಾಜಿಕ ಸಮಸ್ಯೆಗಳನ್ನು ಪರಿಹರಿಸಲು ನೀವು ಬಳಸಬೇಕು. ನೀವು ಜೀವನ ಕೌಶಲ್ಯಗಳ ತರಬೇತುದಾರರಾಗಬೇಕು ಮತ್ತು ಗ್ರಾಮೀಣ ಜನರಿಗೆ ತರಬೇತಿ ನೀಡಬೇಕು" ಎಂದು ಹೇಳಿದರು.

ಸಮಾಜ ಕಾರ್ಯ ವಿಭಾಗದ ಮುಖ್ಯಸ್ಥೆ ಪ್ರೋ. ಪವಿತ್ರಾ ಆರ್. ಆಲೂರ್ ಅವರು ಈ ಸಂದರ್ಭದಲ್ಲಿ ಮಾತನಾಡಿ, ತರಬೇತುದಾರರ ಕಾರ್ಯಕ್ರಮವು ಒತ್ತಡ ನಿರ್ವಹಣೆ, ಪರಿಣಾಮಕಾರಿ ಸಂವಹನ, ಸಮಸ್ಯೆಗೆ ಪರಿಹಾರ, ನಿರ್ಧಾರ ತೆಗೆದುಕೊಳ್ಳುವುದು, ಸೃಜನಶೀಲ ಚಿಂತನೆ, ಸ್ವಯಂ ಅರಿವು, ಪರಸ್ಪರ ಸಂಬಂಧಗಳನ್ನು ಹೆಚ್ಚಿಸುವುದು ಮತ್ತು ಸಹಾನುಭೂತಿ ಮುಂತಾದ ಕೌಶಲ್ಯ ಗಳನ್ನು ಸಮಾಜಕಾರ್ಯ ವಿದ್ಯಾರ್ಥಿಗಳಿಗೆ

ಒದಗಿಸುವ ಗುರಿಯನ್ನು ಹೊಂದಿದೆ. ನೀವು ಗ್ರಾಮೀಣಬಾಗದ ಹದಿಹರೆಯದ ವಿದ್ಯಾರ್ಥಿಗಳಿಗೆ ಈ ಕೌಶಲ್ಯಗಳ ತರಬೇತಿ ನೀಡಬೇಕು ಎಂದು ಹೇಳಿದರು.

ಕಾರ್ಯಕ್ರಮ ಸಂಯೋಜಕಿ ಡಾ. ಚಿತ್ಕಲಾ ವೆಂಕರೆಡ್ಡಿ ಸ್ವಾಗತಿಸಿ, ಪ್ರಾಸ್ತಾವಿಕ ಭಾಷಣ ಮಾಡಿ, ಜೀವನ ಕೌಶಲ್ಯ ಕಾರ್ಯಗಾರ ನಡೆಸುವ ವಿಧಾನ ಮತ್ತು ಪ್ರಕ್ರಿಯೆಯ ಬಗ್ಗೆ ವಿವರಿಸಿದರು. ಈ ಕಾರ್ಯಕ್ರಮವು ವ್ಯಕ್ತಿಗಳನ್ನು ಸಬಲೀಕರಣಗೊಳಿಸುವುದು, ವಿದ್ಯಾರ್ಥಿಗಳ ಆತ್ಮ ವಿಶ್ವಾಸವನ್ನು ಬಲಪಡಿಸುವುದು ಮತ್ತು ನಿಮ್ಮ ಸ್ವಂತ ಸವಾಲುಗಳನ್ನು ಎದುರಿಸಲು ಮಾತ್ರವಲ್ಲದೆ ಪರಿಣಾಮಕಾರಿ ಪರಿಹಾರಗಳನ್ನು ಕಂಡುಕೊಳ್ಳುವ ಮೂಲಕ ಇತರರಿಗೆ ಸಹಾಯ ಮಾಡಲು ಅಗತ್ಯವಾದ ಕೌಶಲ್ಯಗಳೊಂದಿಗೆ ನಿಮ್ಮನ್ನು ಸಜ್ಜುಗೊಳಿಸುವ ಗುರಿಯನ್ನು ಹೊಂದಿದೆ ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ಜೀವನ ಕೌಶಲ್ಯ ತರಬೇತಿ ಮಾಹಿತಿವುಳ್ಳ ಪುಸ್ತಕಗಳನ್ನು ನೀಡಲಾಯಿತು. ಪ್ರೋ ಚನ್ನವೀರ್ ಆರ್.ಎಂ, ಡಾ. ಲಕ್ಷ್ಮಣ, ಡಾ.ಶಿವಮೂರ್ತಿ, ಮತ್ತು ಡಾ. ಶ್ರೀನಿವಾಸ, ಡಾ. ಹರೀಶ್, ಡಾ. ಭಾಗ್ಯಶ್ರೀ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಉತ್ತರ ವಲಯ ಸಮಸ್ತ ಶಿಕ್ಷಕರ ಸಂಘಗಳಿಂದ ಶಿಕ್ಷಕರ ದಿನಾಚರಣೆ



**ಕಲಬುರಗಿ,ಸೆ.16–** ನಗರದಕೆಂಚಬಸವ ಶಿವಾನುಭವ ಮಂಟಪದಲ್ಲಿ ಜಿಲ್ಲಾ ಪಂಚಾಯತ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಮತ್ತು ಕ್ಷೇತ್ರ ಸಮನ್ವಯಾಧಿಕಾರಿಗಳಕಲಬುರಗಿ ಉತ್ತರ ವಲಯದ ಸಮಸ್ತ ಶಿಕ್ಷಕರ ಸಂಘಗಳ ಸಹಯೋಗದಲ್ಲಿ 2025-26 ನೇ ಸಾಲಿನ ಶಿಕ್ಷಕರ ದಿನಾಚರಣೆ ಹಾಗೂ ನಿವೃತ್ತ ಶಿಕ್ಷಕರಿಗೆ ಸನ್ಮಾನ ಸಮಾರಂಭ ನಡೆಯಿತು. ಕಾರ್ಯಕ್ರಮವನ್ನು ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮಅಧ್ಯಕ್ಷೆ ಹಾಗೂ ಕಲಬುರಗಿ ಉತ್ತರ ಶಾಸಕಿ ಖನೀಜ್ ಫಾತಿಮಾ ಶಿಕ್ಷಕರಿಗೆ ಸನ್ಮಾನಿಸಿ ಮಾತನಾಡಿದರು ಇತ್ತೀಚಿನ ದಿನಗಳಲ್ಲಿ ಸರಕಾರಿ ಶಿಕ್ಷಕರ ಪರಿಶ್ರಮದಿಂದ ಶೈಕ್ಷಣಿಕವಾಗಿ ಅಭಿವೃದ್ಧಿ ಹೊಂದುತ್ತಿರುವುದು ಸಂತಸದ ಸಂಗತಿಯಾಗಿದೆ ಎಂದು ಶಾಸಕಿ ಖನೀಜ್ ಫಾತಿಮಾ ಹೇಳಿದರು.

ಈ ಸಂದರ್ಭದಲ್ಲಿ ಫರಾಜ್ ಉಲ್ ಇಸ್ಲಾಂ, ಬಸವರಾಜ ಬಳ್ಳೊಂಡಗಿ,ಸೈಯದ್ ಅಹ್ಮದ್ ಅಲಿ,ಶೇಖ ಮುಜಿಬ್,ಧರ್ಮರಾಜ ಭೂಸನೂರ,ವಿಜಯಕುಮಾರ,ಅಶೋಕ ಸೊನ್ನ,ಚಾಂದಸಾಬ ಹಕೀಮ್, ಕೆ.ಎಚ್. ಮಲ್ಲಿಕಾರ್ಜುನ. ಎ.ಡಿ. ಭಾಶಾ,ಶಿವಾನಂದ ಪಾಸೋಡಿ, ದಶರಥ, ಸೋಮಶೇಖರ, ಶಾಂತಾಬಾಯಿ ಬಿರಾದರ,

ದಶರಥ.,ಸೋಮಶೇಖರ ಹಂಚಿನಾಳ, .ಚಂದ್ರಕಾಂತ ಕಿಣಗಿ,ಲಕ್ಷ್ಮೀಕಾಂತ ಮೇತ್ರಿ, ಸಾಯಿಬಣ್ಣ, ಮೊಹಮ್ಮದ್ ಅಲ್ತಾಫ್ ಉಪಸ್ಥಿತರಿದ್ದರು

# ಕೆರಿಭೋಸಗಾದಲ್ಲಿ ಅಂಬೇಡ್ಕರ್ ಪ್ರತಿಮೆ ಅನಾವರಣ



**ಕಲಬುರಗಿ,ಸೆ.16–**ಇಲ್ಲಿಗೆ ಸಮೀಪದ ಕೆರಿ ಭೋಸಗಾ ಗ್ರಾಮದಲ್ಲಿ ಭಾರತೀಯ ಸಂವಿಧಾನದ ಪ್ರಮುಖ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಪ್ರತಿಮೆಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಸೋಮವಾರ ಅನಾವರಣಗೊಳಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವ ಪ್ರಿಯಾಂಕ್ ಖರ್ಗೆ, ಸಮಾನತೆಯ ಸಮಾಜವನ್ನು ನಿರ್ಮಿಸುವಲ್ಲಿ ಮತ್ತು ಅಂಚಿನಲ್ಲಿರುವ ಸಮುದಾಯಗಳನ್ನು ಸಬಲೀಕರಣಗೊಳಿಸುವಲ್ಲಿ ಡಾ. ಅಂಬೇಡ್ಕರ್ ಅವರ ಅಕಾಲಿಕ ಕೊಡುಗೆಗಳನ್ನು ಎತ್ತಿ ತೋರಿಸಿದರು. ತಳಮಟ್ಟದಲ್ಲಿ ಪ್ರಜಾಪ್ರಭುತ್ವವನ್ನು ಬಲಪಡಿಸಲು ಅಂಬೇಡ್ಕರ್ ಅವರ ಸಮಾನತೆ, ನ್ಯಾಯ ಮತ್ತು ಭ್ರಾತೃತ್ವದ ಆದರ್ಶಗಳನ್ನು ಅನುಸರಿಸುವ ಮಹತ್ವವನ್ನು ಅವರು ಒತ್ತಿ ಹೇಳಿದರು. ಪ್ರತಿಮೆಯನ್ನು ಸ್ಥಾಪಿಸುವಲ್ಲಿ ಗ್ರಾಮಸ್ಥರ ಪ್ರಯತ್ನವನ್ನು ಹಾಜರಿದ್ದ ಗಣ್ಯರು ಶ್ಲಾಘಿಸಿದರು, ಇದು ಸಾಮಾಜಿಕ ನ್ಯಾಯದ ಸಂಕೇತ ಮತ್ತು ಭವಿಷ್ಯದ ಪೀಳಿಗೆಗೆ ಸ್ಫೂರ್ತಿ ಎಂದು ಬಣ್ಣಿಸಿದರು

ಅನಾವರಣ ಸಮಾರಂಭದಲ್ಲಿ ಹಲವಾರು ಪ್ರಮುಖ ನಾಯಕರು ಮತ್ತು ಸಾರ್ವಜನಿಕ ಪ್ರತಿನಿಧಿಗಳು ಉಪಸ್ಥಿತರಿದ್ದರು. ಶಾಸಕರಾದ ಅಲ್ಲಮ ಪ್ರಭು ಪಾಟೀಲ್,ಸಂತೋಷ್ ಪಾಟೀಲ್ ಧನ್ನೂರ್, ಜಿಲ್ಲಾ ಪಂಚಾಯತ್ ಮಾಜಿ ಸದಸ್ಯೆ ರಾಜ್ವಿ ಜೇನ್, ಹಿರಿಯ ನಾಯಕ ನೀಲಕಂಠ ರಾವ್ ಮೂಲ್ಗೆ ಮತ್ತು ಸಾಮಾಜಿಕ ಕಾರ್ಯಕರ್ತ ರಾಜು ಕಪನೂರ್ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.ಸಮಾರಂಭದಲ್ಲಿ ಸಾಂಸ್ಕೃತಿಕ ಪ್ರದರ್ಶನಗಳು ಮತ್ತು ಪುಷ್ಪ ನಮನಗಳನ್ನು ಸಲ್ಲಿಸಲಾಯಿತು.

## ಅಂಚೆ ಜೀವ ವಿಮೆ ಉತ್ಪನ್ನಗಳ ಮಾರಾಟ ಪ್ರತಿನಿಧಿಗಳ ಆಯ್ಕೆಗೆ ನೇರ ಸಂದರ್ಶನ

**ರಾಯಚೂರು,ಸೆ.16–** ಇಲ್ಲಿನ ಅಂಚೆ ಇಲಾಖೆಯಿಂದ ರಾಯಚೂರು ವಿಭಾಗದಲ್ಲಿ ಅಂಚೆ ಜೀವ ವಿಮೆ ಹಾಗೂ ಗ್ರಾಮೀಣ ಅಂಚೆ ಜೀವ ವಿಮೆ ಉತ್ಪನ್ನಗಳನ್ನು ಮಾರಾಟ ಮಾಡಲು ನೇರ ಪ್ರತಿನಿಧಿಗಳ ಆಯ್ಕೆಗಾಗಿ ನೇರ ಸಂದರ್ಶನಕ್ಕೆ ಆಸಕ್ತ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಸೆಪ್ಟೆಂಬರ್ 25ರ ಬೆಳಿಗ್ಗೆ 11 ಗಂಟೆಗೆ ರಾಯಚೂರಿನ ಗಂಜ್ ವೃತ್ತದ ಬಳಿರುವ ಅಂಚೆ ಅಧೀಕ್ಷಕರ ಕಚೇರಿಯಲ್ಲಿ ನೇರ ಸಂದರ್ಶನ ಹಮ್ಮಿಕೊಳ್ಳಲಾಗಿದೆ.

ಸಂದರ್ಶನಕ್ಕೆ ಹಾಜರಾಗುವ ಅಭ್ಯರ್ಥಿಗಳು 10ನೇ ತರಗತಿ ಪಾಸಾಗಿದ್ದು, ಕನಿಷ್ಠ 18 ವರ್ಷ ಪೂರ್ಣವಾಗಿರಬೇಕು. ನಿರುದ್ಯೋಗಿ, ಸ್ವಯಂ ಉದ್ಯೋಗನಿರತ ಯುವಕರು, ವಿಮಾ ಕಂಪನಿಗಳ ಮಾಜಿ ಏಜೆಂಟರು, ಸಲಹೆಗಾರರು, ಮಾಜಿ ಸೈನಿಕರು, ಅಂಗನವಾಡಿ ಕಾರ್ಯಕರ್ತೆಯರು, ಮಹಿಳಾ ಮಂಡಳದ ಕಾರ್ಯಕರ್ತೆಯರು, ನಿವೃತ್ತ ಪ್ರಧಾನ ಮತ್ತು ಗ್ರಾಮ ಪಂಚಾಯತ್ ಸದಸ್ಯರು ಹಾಗೂ ಅಂಚೆ ವಿಭಾಗದ ಮುಖ್ಯಸ್ಥರಿಗೆ ಸಮಂಜಸವೆಂದು ಕಂಡುಬಂದ ಯಾವುದೇ ಅಭ್ಯರ್ಥಿಗಳನ್ನು ಆಯ್ಕೆ ಮಾಡಿಕೊಳ್ಳಲಾಗುತ್ತದೆ.

ನುರಿತ, ಸಂವಹನಾ ಕಲೆ ಹಾಗೂ ವಿಮಾ ಮಾರಾಟ ಕ್ಷೇತ್ರದಲ್ಲಿ ಪೂರ್ವಾನುಭವ ಹೊಂದಿರುವವರಿಗೆ ಆದ್ಯತೆ ನೀಡಲಾಗುತ್ತಿದೆ. ಆಯ್ಕೆಯಾದ ಅಭ್ಯರ್ಥಿಗಳು 5 ಸಾವಿರ ರೂ.ಗಳ ರಾಷ್ಟ್ರೀಯ ಉಳಿತಾಯ ಪತ್ರ ಅಥವಾ ಕಿಸಾನ್ ವಿಕಾಸ ಪತ್ರದ ರೂಪದಲ್ಲಿ ಭದ್ರತಾ ಠೇವಣಿ ಇಡಬೇಕು. ಆಯ್ಕೆಯಾದ ಪ್ರತಿನಿಧಿಗಳಿಗೆ ವ್ಯವಹಾರಕ್ಕೆ ತಕ್ಕಂತೆ ಸೂಕ್ತ ಕಮಿಷನ್ ನೀಡಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ಹತ್ತಿರದ ಅಂಚೆ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ ಎಂದು ರಾಯಚೂರು ವಿಭಾಗದ ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸೆಪ್ಟೆಂಬರ್ 18 ರಿಂದ ಮೂರು ದಿನಗಳ ಕಾಲ ಕನ್ನಡದಲ್ಲಿ 6ನೇ ವಿಜ್ಞಾನ, ತಂತ್ರಜ್ಞಾನ ಸಮ್ಮೇಳನ

**ರಾಯಚೂರು,ಸೆ.16–** ಬೆಂಗಳೂರಿನ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ, ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ ಇವರ ಸಹಯೋಗದಲ್ಲಿ ಕೃಷಿ ವಿವಿಯ ಜಗಜ್ಯೋತಿ ಬಸವೇಶ್ವರ ಪ್ರೇಕ್ಷಾ ಗೃಹದಲ್ಲಿ ಸೆಪ್ಟೆಂಬರ್ 18, 19 ಹಾಗೂ 20ರಂದು ಕನ್ನಡದಲ್ಲಿ 6ನೇ ವಿಜ್ಞಾನ ಮತ್ತು ತಂತ್ರಜ್ಞಾನ ಸಮ್ಮೇಳನ ಹಮ್ಮಿಕೊಳ್ಳಲಾಗಿದೆ.

ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಹಾಗೂ ಕರ್ನಾಟಕ ವಿಧಾನ ಪರಿಷತ್ತು ಸಭಾ ನಾಯಕರಾದ ಎನ್.ಎಸ್.ಬೋಸರಾಜು ಅವರು ಕಾರ್ಯಕ್ರಮ ಉದ್ಘಾಟಿಸುವರು. ಸ್ಮರಣ ಸಂಚಿಕೆಯ ಮುಖಪುಟವನ್ನು ಸಂಸದರಾದ ಜಿ. ಕುಮಾರ ನಾಯಕ ಅವರು ಬಿಡುಗಡೆ ಮಾಡುವರು.

ಮುಖ್ಯ ಅತಿಥಿಗಳಾಗಿ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯ ಅಧ್ಯಕ್ಷರಾದ ಪ್ರೊ. ರಾಜಾಸಾಬ್ ಎ.ಎಚ್., ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಸರ್ಕಾರದ ಕಾರ್ಯದರ್ಶಿಗಳಾದ ಡಾ. ಏಕ್‌ರೂಪ್ ಕೌರ್, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ನಿರ್ದೇಶಕರಾದ ಸದಾಶಿವ ಪ್ರಭು ಬಿ. ಅವರು ಆಗಮಿಸಲಿದ್ದು, ಕಾರ್ಯಕ್ರಮದ ಅಧ್ಯಕ್ಷತೆಯನ್ನು ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ. ಶಿವರಾಜ ಎಸ್.ಪಾಟೀಲ್ ಅವರು ವಹಿಸಲಿದ್ದಾರೆ.

ಗೌರವ ಉಪಸ್ಥಿತಿಯನ್ನು ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮೀಣ ಶಾಸಕರಾದ ಬಸನಗೌಡ ದದ್ದಲ್, ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ. ಎಂ. ಹನುಮಂತಪ್ಪ, ವಿಧಾನ ಪರಿಷತ್ ಶಾಸಕರು ಹಾಗೂ ಮಾನ್ಯ ವ್ಯವಸ್ಥಾಪನಾ ಮಂಡಳಿ ಸದಸ್ಯರಾದ ಶರಣಗೌಡ ಪಾಟೀಲ್ ಬಯ್ಯಾಪುರ, ಮಾಜಿ ಶಾಸಕರು ಹಾಗೂ ಮಾನ್ಯ ವ್ಯವಸ್ಥಾಪನಾ ಮಂಡಳಿ ಸದಸ್ಯರಾದ ಬಸನಗೌಡ ಬ್ಯಾಗವಾಟ, ವ್ಯವಸ್ಥಾಪನಾ ಮಂಡಳಿ ಸದಸ್ಯರಾದ ಡಿ. ಮಲ್ಲಿಕಾರ್ಜುನ, ಮಲ್ಲೇಶ ಕೊಲಿಮಿ, ಮಧುಸೂದನ ರೆಡ್ಡಿ, ತಿಮ್ಮಣ್ಣ ಸೋಮಪ್ಪ ಚಾವಡಿ, ಡೀನ್ ಡಾ. ಕೆ. ನಾರಾಯಣರಾವ್, ಕುಲಸಚಿವರು ಹಾಗೂ ಮಾನ್ಯ ವ್ಯವಸ್ಥಾಪನಾ ಮಂಡಳಿ ಸದಸ್ಯ ಕಾರ್ಯದರ್ಶಿಗಳಾದ ಶರಣಬಸಪ್ಪ ಕೋಟೆಪ್ಪಗೋಳ, ಕ.ವಿ.ತಂ. ಅಕಾಡೆಮಿಯ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಡಾ.ಆನಂದ ಆರ್. ಅವರು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ

## ಟಾಟಾ ಏಸ್ ವಾಹನ ಪಲ್ಟಿ : 32 ಕೂಲಿ ಕಾರ್ಮಿಕರಿಗೆ ಗಾಯ

**ಅಥಣಿ,ಸೆ.16–** ಮಹಿಳಾ ಕೂಲಿ ಕಾರ್ಮಿಕರನ್ನು ಕರೆದೊಯ್ಯುತ್ತಿದ್ದ ಟಾಟಾ ಏಸ್ ವಾಹನ ಪಲ್ಟಿಯಾಗಿ ಸುಮಾರು 32 ಮಹಿಳಾ ಹಾಗೂ ಇಬ್ಬರು ಪುರುಷ ಕೂಲಿ ಕಾರ್ಮಿಕರು ಗಾಯಗೊಂಡಿರುವ ಘಟನೆ ತಾಲ್ಲೂಕಿನ ಯಕ್ಕಂಚಿ ಗ್ರಾಮದ ಬಳಿ ನಡೆದಿದೆ. ಅದರಲ್ಲಿ ಐದು ಜನ ಮಹಿಳೆಯರಿಗೆ ಗಂಭೀರ ಗಾಯಗೊಂಡಿದ್ದು, ಯಾವುದೇ ಪ್ರಾಣ ಹಾನಿಯಾಗಿಲ್ಲ.

ತಾಲೂಕಿನ ಸತ್ತಿ ಗ್ರಾಮದಿಂದ ಅಡಹಳಟ್ಟಿ ಗ್ರಾಮಕ್ಕೆ ತೋಟದಲ್ಲಿ ಕೂಲಿ ಕೆಲಸದ ನಿಮಿತ್ತ ಹೊರಟಿದ್ದ ವೇಳೆ ವಾಹನ ಟೈರ್‌ಬಷ್ಟ್ ಆಗಿ ಈ ದುರ್ಘಟನೆ ಸಂಭವಿಸಿದೆ.

## ಯುವನಿಧಿ ಯೋಜನೆಯ ಫಲಾನುಭವಿಗಳು ಕೌಶಲ್ಯಕರ್ ಪೋರ್ಟಲ್‌ನಲ್ಲಿ ಕಡ್ಡಾಯ ನೋಂದಾಯಿಸಬೇಕು



ಯುವ ಮಾರ್ಗ ಸುದ್ದಿ

**ರಾಯಚೂರು,ಸೆ.16–** ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಯಲ್ಲೊಂದಾದ ಯುವನಿಧಿ ಯೋಜನೆಯ ಫಲಾನುಭವಿಗಳು ಕೌಶಲ್ಯ ಮತ್ತು ಉದ್ಯಮಶೀಲತೆ ತರಬೇತಿ ಪಡೆಯಲು ಕೌಶಲ್ಯಕರ್ ಪೋರ್ಟಲ್‌ನಲ್ಲಿ ನೋಂದಾಯಿಸಿಕೊಳ್ಳುವ ಜಾಗೃತಿ ಕಾರ್ಯಗಾರವು ಸೆಪ್ಟೆಂಬರ್ 15ರಂದು ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ನಡೆಯಿತು.

ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷರಾದ ಪಾಮಯ್ಯ ಮುರಾರಿ ಅವರು ಕಾರ್ಯಾಗಾರಕ್ಕೆ ಚಾಲನೆ ನೀಡಿ ಮಾತನಾಡಿ, ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳಾದ ಪಂಚ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಯುವನಿಧಿ ಯೋಜನೆಯಡಿ ಹೆಚ್ಚು ಹೆಚ್ಚು ವಿದ್ಯಾರ್ಥಿಗಳು ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಲು ಮತ್ತು ಯುವನಿಧಿ ಯೋಜನೆಯಡಿಯಲ್ಲಿ ನೋಂದಾಯಿಸಿಕೊಂಡ ಅಭ್ಯರ್ಥಿಗಳಿಗೆ ವಿನ್ಯಾಸಗೊಳಿಸಲಾದ ಮಾರುಕಟ್ಟೆ ಕೌಶಲ್ಯಗಳ ಸಜ್ಜುಗೊಳಿಸಲು ಉಚಿತ ಕೋರ್ಸ್ ಮತ್ತು ತರಬೇತಿ ಕಾರ್ಯಕ್ರಮಗಳನ್ನು ಪಡೆಯಲು ಕೌಶಲ್ಯಕರ್ ಪೋರ್ಟಲ್‌ನಲ್ಲಿ ಕಡ್ಡಾಯ ನೋಂದಾಯಿಸಬೇಕು. ಒಂದು ವೇಳೆ ತರಬೇತಿ ಪಡೆಯಲು ಕೌಶಲ್ಯಕರ್ ಪೋರ್ಟಲ್‌ನಲ್ಲಿ ನೋಂದಾಯಿಸಿಕೊಳ್ಳದೆ ಇದ್ದಲ್ಲಿ ಅಂತಹ ಅಭ್ಯರ್ಥಿಗಳಿಗೆ ನಿರುದ್ಯೋಗ ಭತ್ಯೆಯನ್ನು ಸ್ಥಗಿತಗೊಳಿಸಲಾಗುವುದು ಎಂದು ಅವರು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ.ಶಿವಾನಂದ ಕೆಳಗಿನಮನಿ ಅವರು ಮಾತನಾಡಿ, ತಾವು ವಿದ್ಯಾರ್ಥಿಯಾಗಿದ್ದಾಗ ಪದವಿ ಮುಗಿಸಿದ ನಂತರ ತಮಗೆ ಕೈಯಲ್ಲಿ ಬಿಡಿಗಾಸು ಇರುತ್ತಿರಲಿಲ್ಲ ಹಾಗೂ ಕನಿಷ್ಟ ಪ್ರಮಾಣದ ಅನುಕೂಲತೆಗಳು ಇರಲಿಲ್ಲ. ಈಗಿನ ಬದಲಾದ ಪರಿಸ್ಥಿತಿಯಲ್ಲಿ ಸರ್ಕಾರವು ಜಾರಿ ಮಾಡಿದ ಯುವನಿಧಿಯಂತಹ ಯೋಜನೆಗಳ ಸದುಪಯೋಗ ಪಡೆಯಬೇಕು. ಸರ್ಕಾರದ ವಿವಿಧ ಯೋಜನೆಗಳ ಅನುಕೂಲತೆಯು ಸಮಾಜದ ಕಟ್ಟಕಡೆಯ ಪ್ರತಿ ಫಲಾನುಭವಿಗೂ ಸಿಗುವಂತೆ ಮಾಡಲು ಇಂತಹ ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಿದ ಅಧಿಕಾರಿಗಳ ಶ್ರಮ ಪ್ರಶಂಸಾರ್ಹವಾಗಿದೆ. ಅರ್ಹ ಎಲ್ಲಾ ಅಭ್ಯರ್ಥಿಗಳು ಈ ಯುವನಿಧಿ ಯೋಜನೆಯ ಲಾಭ ಪಡೆದುಕೊಳ್ಳಬೇಕು ಎಂದು ಸಲಹೆ ಮಾಡಿದರು.

ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಜಿ.ಯು.ಹುಡೇದ್ ಅವರು ಪ್ರಾಸ್ತಾವಿಕ ಮಾತನಾಡಿ, ರಾಯಚೂರು ಜಿಲ್ಲೆಯು ಯುವನಿಧಿ ನೋಂದಣಿಯಲ್ಲಿ ರಾಜ್ಯದಲ್ಲಿಯೇ 3ನೇ ಸ್ಥಾನದಲ್ಲಿದೆ. ನೋಂದಣೆ ಮಾಡಿಕೊಂಡ ಫಲಾನುಭವಿಗಳು ಹಾಗೂ ನಿರುದ್ಯೋಗ ಭತ್ಯೆ ಪಡೆಯುತ್ತಿರುವ ಫಲಾನುಭವಿಗಳು ಯುವನಿಧಿ ಪ್ಲಸ್ ಯೋಜನೆ ಕೌಶಲ್ಯಕರ್ ಪೋರ್ಟಲ್‌ನಲ್ಲಿ ನೋಂದಾಯಿಸಿಕೊಂಡು ಸರ್ಕಾರದ ವಿವಿಧ ಇಲಾಖೆಗಳಾದ ಸರ್ಕಾರಿ ಉದ್ಯೋಗ ಮತ್ತು ಕೈಗಾರಿಕಾ ತರಬೇತಿ ಇಲಾಖೆ, ಜಿಟಿಟಿಸಿ, ಕ್ಯಾಪ್ಯುಟೇಕ್ ಮತ್ತು ಸಿಡಾಕ್ ಇನ್ನಿತರ ಸರ್ಕಾರಿ ಸಂಸ್ಥೆಗಳಿಂದ ಉಚಿತವಾಗಿ ವಿವಧ ತರಬೇತಿಗಳನ್ನು ಪಡೆಯಬಹುದಾಗಿದೆ. ಆದ್ದರಿಂದ ಹೆಚ್ಚಿನ ಸಂಖ್ಯೆಯಲ್ಲಿ ಅಭ್ಯರ್ಥಿಗಳು ಯುವನಿಧಿ ಪ್ಲಸ್ ಕೌಶಲ್ಯಕರ್ ಪೋರ್ಟಲ್‌ನಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಂಡು ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕೆಂದು ಮನವಿ ಮಾಡಿದರು. ಹಾಗೂ ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ, ಬೆಂಗಳೂರು ಅವರಿಂದ ಸ್ಕಿಲ್ ಇಂಡಿಯಾ ಸ್ಪರ್ಧೆ 2025ಗೆ ವಿಶೇಷ ಕೌಶಲ್ಯಗಳನ್ನು ಹೊಂದಿರುವ ಅಭ್ಯರ್ಥಿಗಳು ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಲು ಸೆ.30 ಕೊನೆಯದಿನವಾಗಿದ್ದು, ಈ ಸ್ಪರ್ಧೆಯಲ್ಲಿ ಭಾಗವಹಿಸಲು ಸಲಹೆ ಮಾಡಿದರು.

ಸಮಾರಂಭದಲ್ಲಿ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಹನುಮಂತ ಜಾಲಿಬೆಂಚಿ, ಆದಿಕವಿ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾನಿಲಯದ ಡಾ.ಕೆ.ವೆಂಕಟೇಶ್, ಜಿಲ್ಲಾ ಪಂಚಾಯತ್‌ನ ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋಣಿ, ಜಿಲ್ಲಾ ಉದ್ಯೋಗ ಅಧಿಕಾರಿ ನವೀನ್ ಕುಮಾರ ಸಂಗೇಪಾಗ್ ಮತ್ತು ವಿಶ್ವವಿದ್ಯಾಲಯದ ಪ್ರಾಧ್ಯಾಪಕರು ಹಾಗೂ ಸಿಬ್ಬಂದಿ ಹಾಜರಿದ್ದರು. ಜಿಲ್ಲಾ ಕೌಶಲ್ಯಾಭಿವೃದ್ಧಿ ಇಲಾಖೆಯ ಸಹಾಯಕ ನಿರ್ದೇಶಕದಾದ ರಾಜಶೇಖರ್ ಎಸ್.ಪಾಟೀಲ್ ವಂದಿಸಿದರು.

## ಕ್ಯಾದಿಗೇರಾ ಗ್ರಾಮದಲ್ಲಿ ಪಂಚಾಯತಿಗೆ ಬೀಗ ಹಾಕಿ:ಅನಿರ್ದಿಷ್ಟ ಧರಣಿ

ಯುವ ಮಾರ್ಗ ಸುದ್ದಿ



**ಅರಕೇರಾ,ಸೆ.16–**ತಾಲೂಕಿನ ಕ್ಯಾದಿಗೇರಾ ಗ್ರಾಮದಲ್ಲಿ ಸುವರ್ಣ ಗ್ರಾಮ ಯೋಜನೆಗೇ ಸುಮಾರು18ವರ್ಷಗಳಿಂದ ಜಾತಕ ಪಕ್ಷಿಯಂತೆ ಕಾದು ಬೇಸತ್ತಾ ಗ್ರಾಮದ ವಸತಿ ರಹಿತ ಮಹಿಳಾ ಫಲಾನುಭವಿಗಳು ಇಂದು ಬೆಳಗಿನ ಜಾವ ಗ್ರಾಮ ಪಂಚಾಯತಿಗೆ ಬೀಗ ಹಾಕಿ ನ್ಯಾಯಕ್ಕಾಗಿ ಅನಿರ್ದಿಷ್ಟ ಧರಣಿ ನಡೆಸಿದ್ದರು.

2007–2 008ರಲ್ಲಿ ಅಂದಿನ ರಾಜ್ಯ ಸರ್ಕಾರ ಕ್ಯಾದಿಗೇರಾ ಗ್ರಾಮವನ್ನು ಅಬಿವೃದ್ಧಿ ಪಡಿಸುವ ಸಲುವಾಗಿ ಕ್ಯಾದಿಗೇರಾ ಗ್ರಾಮವನ್ನು ಸುವರ್ಣ ಗ್ರಾಮ ಯೋಜನೆಗೇ ಅಯ್ಕೆ ಮಾಡಿದ್ದರು.ಹಾಗೂ ಅಯ್ಕೆಯಾದ ಇನ್ನೆಲೆ ಸುಮಾರು 9ಎಕರೆ ಜಾಗವನ್ನು ಖಾಸಗಿಯವರಿಂದ ದಿನಾಂಕ 24–07–2 007 ರಂದು ಸರಕಾರ ಖರೀದಿಸಿದೆ ಸದ್ಯ ಆ ಸ್ಥಳ ರಾಜ್ಯಪಾಲರ ಹೆಸರಿನಲ್ಲಿದ್ದು ಖಾಲಿ ಬಿದ್ದಿದೆ.

ದಿನಾಂಕ 14–08–2 017ರಂದು ಸುವರ್ಣ ಗ್ರಾಮದ ಅಡಿಗಲ್ಲು ಸಮಾರಂಭ ನಡೆದಿರುತ್ತದೆ ಹಾಗೂ28–08–2 017ರಂದು 10ವರ್ಷಗಳ ನಂತರ ಗ್ರಾಮ ಪಂಚಾಯತಿಯು ಗ್ರಾಮ ಸಭೆ ನಡೆಸಿ ವಸತಿ ರಹಿತ ಫಲಾನುಭವಿಗಳಿಗೆ ಹಂಚಲು ಫಲಾನುಭವಿಗಳನ್ನು ಆಯ್ಕೆ ಮಾಡಿರುತ್ತಾರೆ.ಹಾಗೂ ಜಂಟಿ ನಿರ್ದೇಶಕರು ಕಲಬುರ್ಗಿ (ನಗರ ಮತ್ತುಗ್ರಾಮಾಂತರ ಯೋಜನ ಇಲಾಖೆ) ಇವರಿಂದ ಸ್ಥಳ ನಕ್ಷೆಯು ಸಹ ಆಗಿರುತ್ತದೆ.ಇದಲ್ಲದೇ ಗ್ರಾಮ ಪಂಚಾಯತಿ ಅಧಿಕಾರಿಗಳಿಂದ ಸುವರ್ಣ ಜಾಗದ ಫಲಾನುಭವಿಗಳಿಂದ ಆಧಾರ್ ಕಾರ್ಡ್ ಹಾಗೂ ರೇಷನ್ ಕಾರ್ಡ್ ನು ಸಹ ಸಂಗ್ರಹಣೆ ಮಾಡಿದ್ದರುತ್ತಾರೆ. ಹಾಗೂ ಸುವರ್ಣ ಗ್ರಾಮ ಯೋಜನೆ ನೆನೆಗುದಿಗೆ ಬಿದ್ದರು ಇತ್ತೀಚಿಗೆ ಬಂದ ಅಧಿಕಾರಿಗಳ ಬೇಜಾವ್ದಾರಿಯಿಂದ ಹಳ್ಳ ಹಿಡಿದಿದೆ ಹಾಗೂ ಅಧಿಕಾರಿಗಳ ಅನಾವಶ್ಯವಾಗಿ ವಿಳಂಬ ನೀತಿ ಅನುಸರಿಸುತ್ತಿದ್ದಾರೆ ಇಂದರಿಂದ ಬಡವರಿಗೆ ಹಾಗೂ ಜಾಗ ಇಲ್ಲದವರಿಗೆ ತೊಂದರೆ ಆಗುತ್ತಿದೆ ಎಂದು ಅನಿರ್ದಿಷ್ಟ ಧರಣಿ ನಡೆಸಿದ್ದರು.

ಈ ಸಂದರ್ಭದಲ್ಲಿ ಅಣ್ಣರಾವ್ ಇಡಿ ಬೇಟಿ ನೀಡಿ 2006–2007ನೇ ಸಾಲಿನ ಸುವರ್ಣ ಗ್ರಾಮೋದಯ ಯೋಜನೆಯಡಿಲ್ಲಿ ಸುಮಾರು 9ಎಕರೆ ಜಮೀನು ರಾಜ್ಯಪಾಲರ ಹೆಸರಿನಲ್ಲಿ ಇದ್ದು ಈಗಾಗಲೇ ಅನುಮೋದನೆಗೊಂಡ ಪ್ಲೇಟ್ ಗಳಿಗೆ ಬಾಂಡ್ ಗಲ್ಲುಗಳನ್ನು 05–10–2 025ರ ಒಳಗಡೆ ಹಾಕಿಸಿ ಕೊಡುತ್ತೇವೆ ಎಂದು ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹಾಗೂ ಅಧ್ಯಕ್ಷರು ಕ್ರಮವಹಿಸುವುದಾಗಿ ತಿಳಿಸಿದ್ದರು.

ಈ ಸಂದರ್ಭದಲ್ಲಿ ಲಿಂಗಪ್ಪ ಅಬಿವೃದ್ಧಿ ಅಧಿಕಾರಿ, ನೀಲ್ಲಮ್ಮ ರಾಜಶೇಖರ ರಾಥೋಡ್, ಹನುಮಯ್ಯ ಮಾಸ್ತರ, ಶಿವಪ್ಪ ನಾಯಕ, ಮತ್ತು ಡಿ ಎಸ್ ಎಸ್ಮುಖಂಡರು ಹಾಗೂ ಗ್ರಾಮ ಪಂಚಾಯತಿ ಸಿಬ್ಬಂದಿಗಳು ಮತ್ತು ಗ್ರಾಮದ ಹಿರಿಯ ಮುಖಂಡರು,ಹೋರಾಟಗಾರರು ಹಾಗೂ ಫಲಾನುಭವಿಗಳು ಉಪಸ್ಥಿತರಿದ್ದರು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ

9743497111 9743496111

## ಇಂದು ಜಿಲ್ಲಾಡಳಿತದಿಂದ ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ

**ರಾಯಚೂರು,ಸೆ.16–** ಜಿಲ್ಲಾಡಳಿತದಿಂದ ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ–2025ರ ಅಂಗವಾಗಿ ರಾಷ್ಟ್ರ ಧ್ವಜಾರೋಹಣ ಕಾರ್ಯಕ್ರಮವು ಸೆ.17ರ ಬೆಳಿಗ್ಗೆ 9 ಗಂಟೆಗೆ ನಗರದ ಮಹಾತ್ಮಾ ಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಧ್ವಜಾರೋಹಣ ನೆರವೇರಿಸುವರು. ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಘನ ಉಪಸ್ಥಿತಿ ವಹಿಸುವರು.ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ರಾಯಚೂರು ಮಹಾನಗರ ಪಾಲಿಕೆಯ ಅಧ್ಯಕ್ಷರಾದ ನರಸಮ್ಮ ನರಸಿಂಹಲು ಮಾಡಗಿರಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶಕುಮಾರ ಸಿಂಗ್, ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಎಂ, ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದಾರೆ ಎಂದು ಜಿಲ್ಲಾಡಳಿತದ ಪ್ರಕಟಣೆ ತಿಳಿಸಿದೆ.

## ದಸರಾ ಉದ್ಘಾಟನೆಗೆ ಬಾನು ಮುಷ್ತಾಕ್; ಖಂಡನೆ



ಯುವ ಮಾರ್ಗ ಸುದ್ದಿ

**ಸಿರವಾರ, ಸೆ.16–** ಐತಿಹಾಸಿಕ ಹಿಂದೂ ಧಾರ್ಮಿಕ ಕ್ಷೇತ್ರ ಮೈಸೂರು ದಸರಾ ಉದ್ಘಾಟನೆಗೆ ಕನ್ನಡಾಂಬೆಗೆ ಅವಹೇಳನಕಾರಿ ಹೇಳಿಕೆ ನೀಡಿ, ಹಿಂದೂ ಧಾರ್ಮಿಕ ಭಾವನೆಗಳ ಕುರಿತು ಅಸಹನೆ ಹೊಂದಿರುವ ಭಾನು ಮುಷ್ತಾಕ್ ಅವರನ್ನು ನೇಮಿಸಿರುವ ಕಾಂಗ್ರೆಸ್ ಸರ್ಕಾರದ ನಡೆಯನ್ನು ಖಂಡಿಸಿ 'ಯುವಾ ಬ್ರಿಗೇಡ್' ಸಂಘಟನೆಯ ವತಿಯಿಂದ ತಾಲೂಕ ದಂಡಾಧಿಕಾರಿಗಳು ಮತ್ತು ತಹಶಿಲ್ದಾರರ ಮೂಲಕ ರಾಜ್ಯಪಾಲರಿಗೆ ಮನವಿ ಪತ್ರ ಸಲ್ಲಿಸಲಾಯಿತು. ಹಿಂದೂಗಳ ಧಾರ್ಮಿಕ ಭಾವನೆಯನ್ನು ಕದಡುವ ಉದ್ದೇಶ ಹೊಂದಿರುವ ಸಿದ್ಧರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಬಾನು ಮುಷ್ತಾಕ್ ಅವರನ್ನು ಉದ್ಘಾಟಕರನ್ನಾಗಿ ಆಹ್ವಾನಿಸಿದ್ದು ನಾಡಿನ ಹಿಂದುಗಳ ಅವಹೇಳನ ಮಾಡುತ್ತಿದೆ, ಅವರ ಧಾರ್ಮಿಕ ನಂಬಿಕೆಗಳಿಗೆ ಧಕ್ಕೆ ತರುತ್ತಿದೆ. ಕೂಡಲೇ ಸರ್ಕಾರ ಈ ನಿರ್ಧಾರವನ್ನು ಕೈ ಬಿಡದಿದ್ದರೆ ಮುಂದೆ ಹಿಂದೂಗಳ ಕೋಪಕ್ಕೆ ಗುರಿಯಾಗಬೇಕಾದೀತು. ಇಡೀ ಸಮಾಜ ಪ್ರತಿಭಟನೆಯ ಹಾದಿ ತುಳಿಯಲು ಅವಕಾಶ ಮಾಡಿಕೊಡಬಾರದು ಎಂದು ಮನವಿಯನ್ನು ಒತ್ತಾಯಿಸಲಾಯಿತು.ಯುವಾ ಬ್ರಿಗೇಡ್ ಸಂಘಟನೆಯ ಜಿಲ್ಲಾ ಸಂಚಾಲಕ ಬಸವರಾಜ ಬೊಮ್ಮನಾಳ, ಗುರುಬಸವ ಬೊಮ್ಮನಾಳ, ಪ.ಪಂ ಸದಸ್ಯ ಕೃಷ್ಣ ನಾಯಕ, ಸಿದ್ಧರಾಮೇಶ್ವರ ಪತ್ತಾರ,ಜೆ ಮಂಜುನಾಥ ಗೌಡ,ಕಾಳಪ್ಪ ವಿಶ್ವಕರ್ಮ, ಸುನೀಲ್ ಪಾಟೀಲ ಗಣದಿನ್ನಿ, ಪಿ ಗಣೇಶ, ಸಾಬಣ್ಣ, ಬಸನಗೌಡ ಗೌಡ ಗಣದಿನ್ನಿ, ಸಂತೋಷ ಹಿರೇಮಠ,ಕೆ ಅಯ್ಯನಗೌಡ ಮಾಲಿ ಪಾಟೀಲ, ಅಮರೇಶ ಎಲೆಕ್ಟ್ರಿಷಿಯನ್, ಮಹಾಂತೇಶ ಎನ್, ಸೇರಿದಂತೆ ಇತರರು ಇದ್ದರು.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H